# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 128 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 06–12–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 128 | RNI No: KARKAN/2023/88462 | Chitradurga | Date: 06-12-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಚಿತ್ರದುರ್ಗ ನಗರದ ಅಭಿವೃದ್ಧಿಗೆ ರೂ.50 ಕೋಟಿಗೆ ಬೇಡಿಕೆ: ಶಾಸಕ 2

ವಕ್ಫ್ ವಿವಾದ: ಚಳ್ಳಕೆರೆ ನಗರಕ್ಕೆ ರಾಜ್ಯ ಬಿಜೆಪಿ ಸಂಶೋಧನಾ ತಂಡ ಭೇಟಿ 3

ನಾವು ಮೂರ್ಖರೇ, ಅಥವಾ ಅವರು ಬುದ್ಧಿವಂತರೇ.... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪಿಡಿಓ ಸ್ಪರ್ಧಾತ್ಮಕ ಪರೀಕ್ಷೆ: ನಿಷೇದಾಜ್ಞೆ ಜಾರಿ

» **ಚಿತ್ರದುರ್ಗ**

ಇದೇ ಡಿ.07 ಮತ್ತು 8 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಿಯಮಗಳಂತೆ ನಡೆಸುವ ಸಂಬಂಧ ಪರೀಕ್ಷಾ ಕೇಂದ್ರಗಳಲ್ಲಿನ ಅವ್ಯವಹಾರ ತಡೆಗಟ್ಟಲು ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಡಿ.07ರಂದು ಕನ್ನಡ ಭಾಷಾ ಪರೀಕ್ಷೆ ಚಿತ್ರದುರ್ಗ ನಗರದಲ್ಲಿ 28 ಕೇಂದ್ರಗಳಲ್ಲಿ ಹಾಗೂ ಚಳ್ಳಕೆರೆ ನಗರದಲ್ಲಿ 01 ಪರೀಕ್ಷಾ ಕೇಂದ್ರದಲ್ಲಿ ಮತ್ತು ಡಿ.08ರಂದು ಸಾಮಾನ್ಯ ಜ್ಞಾನ ಪರೀಕ್ಷೆ ಚಿತ್ರದುರ್ಗ ನಗರದಲ್ಲಿ 30 ಪರೀಕ್ಷಾ ಕೇಂದ್ರಗಳು ಹಾಗೂ ಚಳ್ಳಕೆರೆ ನಗರದಲ್ಲಿ 10 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಈ ಪರೀಕ್ಷಾ ಕೇಂದ್ರಗಳಲ್ಲಿ ಅವ್ಯವಹಾರಗಳನ್ನು ತಡೆಗಟ್ಟಲು ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತ ಸಿ.ಆರ್.ಪಿ.ಸಿ ಕಲಂ 144ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ. ಈ ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ ಹಾಗೂ ಇಂಟರ್‌ನೆಟ್ ಕೇಂದ್ರಗಳನ್ನು ಪರೀಕ್ಷೆ ನಡೆಯುವ ದಿನದಂದು ಬೆಳಿಗ್ಗೆ 9 ರಿಂದ ಸಂಜೆ 5ರವರೆಗೆ ಮುಚ್ಚುವಂತೆ ಮತ್ತು ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಯು ಯಾವುದೇ ಕಾರಣಕ್ಕೂ ಮೊಬೈಲ್ ಫೋನ್ ಮತ್ತು ಎಲೆಕ್ಟ್ರಾನಿಕ್ ಉಪಕರಣಗಳನ್ನು ತರದಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ.

### ಡಿಸೆಂಬರ್ 6 ರಂದು ಡಾ; ಬಿ.ಆರ್.ಅಂಬೇಡ್ಕರ್ 68 ನೇ ಮಹಾ ಪರಿನಿರ್ವಾಣ ದಿನಾಚರಣೆ

» **ದಾವಣಗೆರೆ**

ಸಂವಿಧಾನ ಶಿಲ್ಪಿ ಡಾ; ಬಿ.ಆರ್.ಅಂಬೇಡ್ಕರ್ ರವರ 68 ನೇ ಮಹಾ ಪರಿನಿರ್ವಾಣ ದಿನಾಚರಣೆಯನ್ನು ಡಿಸೆಂಬರ್ 6 ರಂದು ಆಚರಿಸಲಾಗುತ್ತಿದ್ದು ಅಂದು ಬೆಳಗ್ಗೆ 10 ಗಂಟೆಗೆ ಅಂಬೇಡ್ಕರ್ ವೃತ್ತದಲ್ಲಿರುವ ಡಾ; ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೆ ಮತ್ತು ಬೆಳಗ್ಗೆ 10.30 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅವರ ಭಾವಚಿತ್ರಕ್ಕೆ ಗಣ್ಯರಿಂದ ಮಾಲಾರ್ಪಣೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಅಂಬೇಡ್ಕರ್ ವೃತ್ತದಲ್ಲಿ ಸ್ವಚ್ಚತೆಯನ್ನು ಮಾಡಲು ಮತ್ತು ಇದಕ್ಕೆ ಬೇಕಾದ ಸಿದ್ದತೆಯನ್ನು ಕೈಗೊಳ್ಳಲು ಪಾಲಿಕೆಯಿಂದ ಕ್ರಮ ವಹಿಸಲು ತಿಳಿಸಿದ್ದು ಸಾರ್ವಜನಿಕರು ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಬಹುದೆಂದು ಅವರು ತಿಳಿಸಿದ್ದಾರೆ.

### ಅಖಿಲ ಭಾರತ ಗೃಹರಕ್ಷಕದಳ ದಿನಾಚರಣೆ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯ ಗೃಹರಕ್ಷಕ ದಳದಿಂದ ಡಿಸೆಂಬರ್ 7 ರಂದು ಸಂಜೆ 4 ಗಂಟೆಗೆ ಪೊಲೀಸ್ ಕವಾಯತು ಮೈದಾನದಲ್ಲಿ ಅಖಿಲ ಭಾರತ ಗೃಹರಕ್ಷಕ ದಳ ದಿನಾಚರಣೆಯನ್ನು ಏರ್ಪಡಿಸಲಾಗಿದೆ. ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಗೌರವ ರಕ್ಷೆ ಸ್ವೀಕರಿಸುವರು. ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಿಲ್ಲಾ ಹೋಂಗಾರ್ಡ್ ಕಮಾಂಡೆಂಟ್ ಡಾ; ಸುಜಿತ್ ಕುಮಾರ್ ಎಸ್.ಹೆಚ್. ಅಧ್ಯಕ್ಷತೆ ವಹಿಸುವರು.

### ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ

» **ದಾವಣಗೆರೆ**

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ದೌರ್ಜನ್ಯ ತಡೆ ನಿಯಮಾವಳಿ ಅನ್ವಯ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ 4ನೇ ತ್ರೈಮಾಸಿಕ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿ.23 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಸದಸ್ಯ ಕಾರ್ಯದರ್ಶಿ ನಾಗರಾಜ್ ತಿಳಿಸಿದ್ದಾರೆ.

---

ಕಾಂಗ್ರೆಸ್ ಪಕ್ಷದ ವಿರುದ್ಧ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಿಡಿ

# ರೈತರ ಭೂಮಿ ಕದಿಯಲು ಬಿಡಲ್ಲ

» **ಚಿತ್ರದುರ್ಗ**




ಯಾವುದೇ ಕಾರಣಕ್ಕೂ ರೈತರ ಭೂಮಿ ಕದಿಯಲು ಬಿಡುವುದಿಲ್ಲ. ಮತ ಬ್ಯಾಂಕ್‌ಗಾಗಿ ಈ ರಾಜಕಾರಣ ಮಾಡುತ್ತಿದ್ದಿರಿ ಇದಕ್ಕೆ ನಾವು ಬಿಡುವುದಿಲ್ಲ. ಕಾಂಗ್ರೆಸ್ ಭೂ ಗಳ್ಳರ ಸರ್ಕಾರ, ಗೋಮಾಳ ಭೂಮಿ ಹೊಡೆಯುವ ಕೆಲಸ ಮಾಡುತ್ತಿದೆ ಎಂದು ವಿಧಾನ ಪರಿಷತ್ ವಿರೋದಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಕಾಂಗ್ರೆಸ್ ಪಕ್ಷದ ವಿರುದ್ಧ ಕಿಡಿ ಕಾರಿದ್ದಾರೆ.

ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯದಲ್ಲಿ ವಕ್ಫ್ ಬೋರ್ಡ್ ವಿರುದ್ಧ ಬಿಜೆಪಿ ಹೋರಾಟ ನಡೆಸುತ್ತಿದೆ. ವಕ್ಫ ಆಸ್ತಿಗಳೇ ಬೇರೆ, ಯಾರಾದರೂ ಕೊಡುಗೆ ದಾನ ಕೊಟ್ಟಿದ್ದರೆ ಮಾತ್ರ ಅವರ ಆಸ್ತಿ.ಆಗಿರುತ್ತದೆ. ಆದರೆ ರಾಜ್ಯದಲ್ಲಿ ಮಠಗಳು, ಶಾಲೆ ಕಾಲೇಜುಗಳ ಆಸ್ತಿ ವಕ್ಫ್ ನಲ್ಲಿ ಸೇರಿದೆ. 1954 ರಲ್ಲಿ ವಕ್ಫ ಹುಟ್ಟಿದ್ದು, 10 ನೇ ಶತಮಾನದಲ್ಲಿ ಎಲ್ಲಿ ಇತ್ತು. ಭಾರತದಲ್ಲಿ ಇಸ್ಲಾಂ ಇರಲಿಲ್ಲ. ಯಾರ ಪ್ರಾಣ ತಿನ್ನಲು ಕಾಂಗ್ರೆಸ್ ಇದನ್ನು ಹುಟ್ಟಿ ಹಾಕಿದರು. ಅವರ ಸೃಷ್ಟಿ ನಾವು ಮುಳುಗಿದ್ದೇವೆ. ಕಾಶ್ಮಿರದಲ್ಲಿ ಮೀಸಲಾತಿ ಸಿಗಬೇಕು ಎಂಬ ಚಿಂತನೆ ಕಾಂಗ್ರೆಸ್‌ಗೆ ಇಲ್ಲ ಎಂದರು.

ರಾಜ್ಯದ ಬಡವರ ರೈತರ ಆಸ್ತಿಗಳನ್ನು ವಕ್ಫ್ ಗೆ ಸೇರಿಸಿದ್ದಾರೆ. ಯಾರು ಇದನ್ನು ಮಾಡಿದ್ದು ? ಕಾಂಗ್ರೆಸ್ ಯಾಕೆ ಮಾಡಿತು ಇದನ್ನು ? ವಕ್ಫ್ ನಮ್ಮ ಆಸ್ತಿ ಎಂದು ಘೋಷಣೆ ಮಾಡಿದರೆ ನ್ಯಾಯಾಲಯಕ್ಕೆ ಹೋಗಿ ಕೇಳುವ ಹಕ್ಕಿಲ್ಲ. ಇಂತಹ ಸರ್ವಾಧಿಕಾರವನ್ನು ಯಾರು ಕೊಟ್ಟಿದ್ದು ವಕ್ಫಗೆ ? ಸಿಎಂ ಆರ್‌ಟಿಸಿ ಯಲ್ಲಿ ಇರುವ ವಕ್ಫ ಹೆಸರನ್ನು ತೆಗೆಯುತ್ತೇವೆ ಎಂದು ಹೇಳುತ್ತಾರೆ. ಅಲ್ಲಿನ ಯಾರು ಒರಾರ್ಥನೆ ಮಾಡುತ್ತಾರೋ ಅವರು ಒಳ್ಳೆಯವರು, ಬೇರೆ ಎಲ್ಲ ಸೈತಾನರು ಎಂದು ಸಚಿವ ಜಮೀರ್ ಜನರನ್ನು ಎತ್ತಿ ಕಟ್ಟುವ ಕೆಲಸವನ್ನು ಮಾಡಿದ್ದಾರೆ ಎಂದರು.

ಜಗ್ಗಲ್ಲ ಬಗ್ಗಲ್ಲ ಎನ್ನುವ ಸಿಎಂ ರಾತ್ರೋ ರಾತ್ರಿ ಬಗ್ಗಿ ತಮ್ಮ ಕೆಲಸ ಮಾಡಿಕೊಳ್ಳುತ್ತಾರೆ. ಕಾಳಜಿ ಇದ್ದರೆ 1974 ಗೆಜೆಟ್ ರದ್ದು ಪಡಿಸಿ, ಸರ್ವೆ ನಂ. 166 ರಲ್ಲಿ ಪಿಂಜಾರರು ಒಂದೆ ಮನೆ ಇದೆ. ಅವರನ್ನು ಉಳಲು 5.20 ಎಕರೆ ಜಮೀನು ಬೇಕಿದೆಯಾ ? ನೆಮ್ಮದಿಯಾಗು ಜನರು ಬಾಳ ಬಾರದು ಇದು ಕಾಂಗ್ರೆಸ್ ಸಂಸ್ಕೃತಿ. ಚಳ್ಳಕೆರೆಯಲ್ಲಿ ಕಬಸ್ತಾನ್ ಜಾಗಕ್ಕೆ ಹೊಂದಿಕೊಂಡಿರುವ ಜಾಗವನ್ನ ವಕ್ಫಗೆ ಸೇರಿಸೆ ಎಂದು ವಕ್ಫ್ ಗೆ ಸೇರಿಸುವಂತೆ ಪತ್ರ ಬರೆಯುತ್ತಾರೆ. ಇದನ್ನು ನ್ಯಾಯಾಲಯಕ್ಕೆ ಹೋಗಿ ಕೇಳುವ ಆಗಿಲ್ಲ. ಬಿಜೆಪಿ ಎಲ್ಲರ ಪರ ಹೋರಾಟ ಮಾಡಿ ಕೆಲಸ ಮಾಡುತ್ತಿದೆ. ಪಿಎಂ ಜೆಪಿಜಿ ಕಮಿಟಿ ಮಾಡಿದ್ದು, ಆ ಸದನ ಸಮಿತಿಗೆ ನಾವು ವರದಿ ಕೊಡಲಿದ್ದೆವೆ.ನೀವು ಗೊಮಾಳಕ್ಕೆ ಕೈ ಹಾಕಿದರೆ ನಾವು ನಿಮ್ಮ ಗೋಮಾಳೆಗೆ ಕೈ ಹಾಕುತ್ತೆವೆ. ರೈತರ ಭೂಮಿ ಹೊಡೆಯುವ ಕೆಲಸವನ್ನು ನಿಲ್ಲಿಸಿ ಎಂದು ಕಾಂಗ್ರೆಸ್ ಪಕ್ಷದ ವಿರುದ್ಧ ಹರಿ ಹಾಯ್ದರು.

ಗೋಷ್ಠಿಯಲ್ಲಿ ಸುನೀಲ್‌ಕುಮಾರ್, ನಾರಾಯಣಸ್ವಾಮಿ ವೈ.ಎ.ಶಾಸಕ ಎಂ.ಚಂದ್ರಪ್ಪ,ಮಾಜಿ ಶಾಸಕ ತಿಪ್ಪೇಸ್ವಾಮಿ, ಎ.ಮುರುಳಿ, ಕುಮಾರಸ್ವಾಮಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ವಕ್ತಾರ ನಾಗಾರಜ ಬೇದ್ರೇ, ದಗ್ಗೆ ಶಿವಪ್ರಕಾಶ್, ಛಲವಾದಿ ತಿಪ್ಪೇಸ್ವಾಮಿ, ಮಾಧುರಿ ಗಿರೀಶ್, ಸೇರಿದಂತೆ ಇತರರು ಉಪಸ್ಥಿತರಿದ್ದರು,

---

## ಸಮುದಾಯದ ಜಾಗೃತಿಗೆ ವಾಲ್ಮೀಕಿ ಜಾತ್ರೆ: ಸ್ವಾಮೀಜಿ



» **ಪರಶುರಾಂಪುರ**

ನೂರಾರು ವರ್ಷಗಳಿಂದ ಶೋಷಣೆಗೊಳಗಾಗಿರುವ ಸಮುದಾಯಗಳ ಜಾಗೃತಿಗಾಗಿ ವಾಲ್ಮೀಕಿ ಜಾತ್ರೆ ಹಮ್ಮಿಕೊಳ್ಳಲಾಗಿದೆ. ಇದು ಸಾಂಪ್ರದಾಯಿಕ ಜಾತ್ರೆಯಾಗಿರದೆ ಸಮುದಾಯದ ಜನರ ಜಾಗೃತಿಗಾಗಿ ನಡೆಯುತ್ತಿರುವ ವೈಚಾರಿಕ ಜಾತ್ರೆಯಾಗಿದೆ ಎಂದು ರಾಜನಹಳ್ಳಿಯ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಸ್ವಾಮೀಜಿ ತಿಳಿಸಿದರು.

ಗ್ರಾಮದ ಯರಗುಂಟಪ್ಪ ದೇವಸ್ಥಾನದ ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಾತ್ರೆಯ ಬಗ್ಗೆ ಮಾತನಾಡಿದ ಅವರು, ಜಾತ್ರೆಯ ಆಶಯಗಳನ್ನು ಜನರಿಗೆ ತಿಳಿಸಲು ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಿಗೆ ಭೇಟಿ ನೀಡಿ ಹೋಗಿ ಜಾತ್ರೆಗೆ ಕರೆಯುತ್ತಿದ್ದೇನೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ನಮಗೆ ಕೊಟ್ಟಿರುವ ಸಂವಿಧಾನಬದ್ದ ಹಕ್ಕುಗಳನ್ನು ಆಳುವ ಸರ್ಕಾರಗಳು ಕೊಡದಿದ್ದರೆ, ಹೋರಾಟ ಅನಿವಾರ್ಯ ಎಂಬುದನ್ನು ಮರೆಯಬಾರದು ಎಂದು ಹೇಳಿದರು.

ಗ್ರಾಮಗಳ ಮಟ್ಟದಲ್ಲಿ ಸಮುದಾಯದವರು ಸಭೆ ನಡೆಸಿ, ಜಾತ್ರೆಗೆ ಹೆಚ್ಚಿನ ಜನರನ್ನು ಕರೆತರಬೇಕು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ಸ್ವಾಮೀಜಿ ನೇತೃತ್ವದಲ್ಲಿ ಸಮುದಾಯದ ಗಣ್ಯರು ಜಾತ್ರೆಯ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಿದರು.

ಈ ವೇಳೆಯಲ್ಲಿ ರುದ್ರೇಶ್, ನಾಗಭೂಷಣ, ನಾಗರಾಜ,ರವಿ, ರಮೇಶ್, ಸಿದ್ದೇಶ್,ಸುಧಾಕರ್, ಚನ್ನಕೇಶವ, ರಾಮಕೃಷ್ಣಪ್ಪ,ರಂಗಣ್ಣ ,ರಾಮಕೃಷ್ಣಪ್ಪ, ತಿಪ್ಪೇಸ್ವಾಮಿ ಸೇರಿದಂತೆವಾಲ್ಮೀಕಿಸಮುದಾಯದ ಹಿರಿಯರು,ಮುಖಂಡರು ಗ್ರಾಮಸ್ಥರು ಉಪಸ್ಥಿತರಿದ್ದರು.

## ನಾಗಗೊಂಡನಹಳ್ಳಿ ಕಾರುಪಲ್ಟಿ: ಓರ್ವವ್ಯಕ್ತಿ ಸ್ಥಳದಲ್ಲೇ ಸಾವು



» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಠಾಣಾ ವ್ಯಾಪ್ತಿಯ ನಾಗಗೊಂಡನಹಳ್ಳಿ ಸಮೀಪ ಚಲಿಸುತ್ತಿದ್ದ ಕಾರಿನ ಟಯರ್ ಸಿಡಿದ ಹಿನ್ನೆಲೆಯಲ್ಲಿ ಕಾರು ಪಲ್ಟಿಯಾಗಿ ಪ್ರಯಾಣಿಸುತ್ತಿದ್ದ ಮಲ್ಲಿಕಾರ್ಜುನ್(35) ಸ್ಥಳದಲ್ಲೇ ಮೃತಪಟ್ಟರೆ, ಮಾರುತಿ ಎಂಬುವವರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ಧಾರೆ.

ಕಾರಿನಲ್ಲಿ ಮಲ್ಲಿಕಾರ್ಜುನ್ ಮತ್ತು ಮಾರುತಿ ನಾಗಗೊಂಡನಹಳ್ಳಿ ಮೂಲಕ ಬಿಜಿಕೆರೆ ಗ್ರಾಮಕ್ಕೆ ತೆರಳುವ ಸಂದರ್ಭದಲ್ಲಿ ಕಾರಿನ ಟಯರ್‌ಸಿಡಿದು ಪಲ್ಟಿಯಾಗಿದೆ. ಕಾರಿನಲ್ಲಿದ್ದ ಮಲ್ಲಿಕಾರ್ಜುನ್‌ನಿಗೆ ರಕ್ತಗಾಯಗಳಾಗಿ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಪಿಎಸ್‌ಐ ಎಂ.ಕೆ.ಬಸವರಾಜು ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

---

**ಪ್ರಮುಖ ಸುದ್ದಿ**

# ಆಸ್ತಿ ಉಳಿಸುವ ನಾಟಕ ನಿಲ್ಲಿಸಿ: ನಗರಸಭೆ ಸದಸ್ಯ ದೀಪು

» **ಚಿತ್ರದುರ್ಗ**



ಆದಿಶಕ್ತಿ ನಗರದಲ್ಲಿ ನಗರಸಭೆ ಜಾಗ ಒತ್ತುವರಿ ಮಾಡಿರುವುದನ್ನು ಆರೋಪಿಸಿ ನಗರಸಭೆ ಆಸ್ತಿ ಎಂದು ಬೋರ್ಡ್ ಹಾಕಿದವರು ಬೋರ್ಡ್ ತೆಗೆದು ಅದು ಖಾಸಗಿ ಆಸ್ತಿ ಎಂದು ಹೇಳುತ್ತಿರುವುದು ನಗರಸಭೆ ಪೌರಯುಕ್ತರು ಮತ್ತು ನಗರಸಭೆ ಸದಸ್ಯರಾದ ಬಾಸ್ಕರ್ ಮತ್ತು ಶ್ರೀನಿವಾಸ್ ಶಾಮೀಲಾಗಿ ನಗರಸಭೆ ಆಸ್ತಿ ಮಾರಟ ಮಾಡುತ್ತಿದ್ದಾರೆ ಎಂದು ನಗರಸಭೆ ಸದಸ್ಯ ದೀಪು ನೇರವಾಗಿ ಆರೋಪ ಮಾಡಿದ್ದಾರೆ.ನಗರದ ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಕೋಟೆ ಮುಂಭಾಗದಲ್ಲಿ ನಗರಸಭೆ ಸದಸ್ಯರಾದ ಎಚ್.ಶ್ರೀನಿವಾಸ್ ಹಾಗೂ ಭಾಸ್ಕರ್‌ರವರು ಕಟ್ಟಿರುವ ಶಿಕ್ಷಣ ಸಂಸ್ಥೆಗಳಿಗೆ ಪರವಾನಗಿ ಪಡೆದಿರುವುದಕ್ಕೆ ದಾಖಲೆ ಒದಗಿಸುವಂತೆ ನಗರಸಭೆ ಪೌರಾಯುಕ್ತರಿಗೆ ದಾಖಲೆ ಕೇಳಿ 15 ದಿನಗಳಾದರೂ ಒದಗಿಸಿಲ್ಲ. ಈ ವಿಚಾರದಲ್ಲಿ ಪೌರಾಯುಕ್ತರು ಅವರ ಜತೆ ಶಾಮೀಲಾಗಿದ್ದಾರೆ ಎಂದು ನಗರಸಭೆ ಸದಸ್ಯ ದೀಪು ಆರೋಪ ಮಾಡಿದರು.

ಕೋಟೆ ಮುಂಭಾಗದಲ್ಲಿರುವ ಅನುಪಮ ವಿದ್ಯಾಸಂಸ್ಥೆ ಹಾಗೂ ರಾಘವೇಂದ್ರ ಪ್ಯಾರಾ ಮೆಡಿಕಲ್ ಕಾಲೇಜು ಈ ಎರಡು ಕಟ್ಟಡಗಳ ದಾಖಲಾತಿ ಒದಗಿಸುಂತೆ 15 ದಿನಗಳ ಹಿಂದೆ ಪೌರಾಯುಕ್ತರಿಗೆ ಪತ್ರ ನೀಡಿದ್ದೆ, ಆದರೆ ಅವರು ಇನ್ನೂ 20 ದಿನಗಳು ಕಾಲಾವಕಾಶ ಬೇಕು ಎಂದು ಪತ್ರ ಕೊಟ್ಟಿದ್ದಾರೆ. ಶ್ರೀನಿವಾಸ್ ಮತ್ತು ಭಾಸ್ಕರ್‌ರವರ ಪ್ರಭಾವಕ್ಕೆ ಒಳಗಾಗಿರುವ ಪೌರಾಯುಕ್ತರು ದಾಖಲೆ ಕೊಡುತ್ತಿಲ್ಲ, ದಾಖಲಾತಿ ಇಲ್ಲದೆ ಭಾಸ್ಕರ್ ಹೆಸರಿನಲ್ಲಿ ಇ ಸತ್ತು ಮಾಡಿಕೊಟ್ಟಿದ್ದಾರೆ.

ಅಲ್ಲದೇ ನಗರಸಭೆ ನಿಯಮಾವಳಿ ಪ್ರಕಾರ ಒಂದು ಅಥವಾ ಎರಡು ಮಹಡಿ ಕಟ್ಟಲು ಮಾತ್ರ ಅವಕಾಶವಿದೆ, ಆದರೆ ನಾಲ್ಕು ಮಹಡಿಗಳನ್ನು ನಿರ್ಮಿಸಿದ್ದಾರೆ. ಪರವಾನಗಿಯೂ ಇಲ್ಲ, ಕಂದಾಯವೂ ಇಲ್ಲ. .ಹಾಗಾದರೆ ನಗರಸಭೆಗೆ ಮೋಸ ಮಾಡುತ್ತಿರುವವರು ಯಾರು ಎಂದು ಪ್ರಶ್ನಿಸಿದರು.ನಗರಸಭೆ ವ್ಯಾಪ್ತಿಗೊಳಪಡುವ ಖಾಲಿ ನಿವೇಶನಗಳಲ್ಲಿ ಮೊದಲು ನಗರಸಭೆ ಆಸ್ತಿ ಎಂದು ನಾಮಫಲಕ ಅಳವಡಿಸುತ್ತಾರೆ,ಆನಂತರ ಬೇರೆಯವರಿಗೆ ಖಾತೆ ಮಾಡಿಸಿಕೊಟ್ಟು ಆ ಆಸ್ತಿಯನ್ನು ಕಬಳಿಸಲು ಮುಂದಾಗುತ್ತಾರೆ, ಆದಿಶಕ್ತಿ ನಗರದಲ್ಲಿ ಆಗಿದ್ದು ಇದೇ ಕೆಲಸ. ಈ ರೀತಿಯ ಕೆಲಸ ಮಾಡಲು ಒಂದು ತಂಡ ಇದ್ದು, ಪೌರಾಯುಕ್ತರು ಇದಕ್ಕೆ ಸಹಕಾರ ನೀಡುತ್ತಿದ್ದಾರೆ ಎಂದು ದೂರಿದರು.

### ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿಕೆ

# ನಗರದ ಅಭಿವೃದ್ಧಿಗೆ ರೂ.50 ಕೋಟಿಗೆ ಬೇಡಿಕೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಅಭಿವೃದ್ಧಿಗೆ ರೂ.50 ಕೋಟಿ ಅನುದಾನ ನೀಡುವಂತೆ ಪೌರಾಡಳಿತ ಸಚಿವ ರಹೀಂ ಖಾನ್ ಅವರಿಗೆ ಪತ್ರ ಬರೆದಿರುವುದಾಗಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.

ಗುರುವಾರ ನಗರಸಭೆ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸಿ ಅವರು ಮಾತನಾಡಿದರು.





ಪೌರಾಡಳಿತ ಸಚಿವರು ನಗರದ ಅಭಿವೃದ್ಧಿಗೆ ಹೆಚ್ಚಿನ ನೆರವು ನೀಡುತ್ತಿದ್ದಾರೆ. 15ನೇ ಹಣಕಾಸು ಹಾಗೂ ಸ್ವಚ್ಛಭಾರತ್ ಮಿಷನ್ ಯೋಜನೆಯಡಿ ನಗರದ ಕಸ ವಿಲೇವಾರಿಗಾಗಿ ರೂ.95.50 ಲಕ್ಷ ವೆಚ್ಚದಲ್ಲಿ 9 ವಾಹನಗಳನ್ನು ಸಚಿವರು ಮಂಜೂರು ಮಾಡಿದ್ದು, ಇವುಗಳಿಗೆ ಚಾಲನೆ ನೀಡಲಾಗಿದೆ. ಇದರೊಂದಿಗೆ 12 ಹೊಸ ಕಸ ವಿಲೇವಾರಿ ವಾಹನಗಳನ್ನು ನೀಡುವ ಭರವಸೆ ನೀಡಿದ್ದಾರೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದ ಅಭಿವೃದ್ಧಿಗೆ ರೂ.25 ಕೋಟಿ ಅನುದಾನ ನೀಡಿದ್ದರು. ಇದರಲ್ಲಿ ರೂ.7.19 ಕೋಟಿಯನ್ನು ನಗರದ ಅಭಿವೃದ್ಧಿಗಾಗಿ ಮೀಸಲು ಇರಿಸಲಾಗಿದೆ. ಯಾವುದೇ ತಾರತಮ್ಯ ಮಾಡದೆ ನಗರ ವ್ಯಾಪ್ತಿಯ ಪ್ರತಿ ವಾರ್ಡ್‌ಗಳಿಗೂ ರೂ.30.95 ಲಕ್ಷ ಅನುದಾನ ನೀಡಲಾಗಿದೆ. ಇದರಲ್ಲಿ ಸಿಸಿ ರಸ್ತೆ, ಒಳಚರಂಡಿ, ಹೈಮಾಸ್ಟ್ ದೀಪ, ಉದ್ಯಾನವನ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಅಭಿವೃದ್ಧಿ ಪಡಿಸಲಾಗುವುದು. ಈ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಗುದ್ದಲಿ ಪೂಜೆ ನೆರವೇರಿಸಿ ಕಾಮಗಾರಿಗೆ ನಿರ್ಮಾಣಕ್ಕೆ ಚಾಲನೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಎಂ.ಬಿ.ಬಿ.ಎಸ್ ಹಾಗೂ ಬಿ.ಇ ಓದುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ರಾಜ್ಯ ಹಣಕಾಸು ಆಯೋಗ ಹಾಗೂ ನಗರಸಭೆಯ ಅನುದಾನದಲ್ಲಿ ಲ್ಯಾಪ್ ಟಾಪ್ ವಿತರಿಸಲಾಗುತ್ತಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳು ವಿದ್ಯಾಭ್ಯಾಸ ತರುವಾಯ ವೈದ್ಯ ವೃತ್ತಿಯಲ್ಲಿ ಬಡವರ ಸೇವೆ ಮಾಡಬೇಕು ಎಂದು ಕಿವಿಮಾತು ಹೇಳಿದರು.



ಕೊಳಚೆನಿರ್ಮೂಲನಾಮಂಡಳಿಯಿಂದ ನೀಡಿರುವಹಕ್ಕುಪತ್ರಗಳಿಗೆನಗರಸಭೆಯಿಂದ ಇ-ಸ್ವತ್ತು ನೀಡಿದ್ದು, ಮುಂದೆ ಯಾರು ಕೂಡ ಇ-ಸ್ವತ್ತು ಪಡೆಯಲು ನಗರಸಭೆಗೆ ಸುತ್ತಾಡುವ ಅಗತ್ಯವಿಲ್ಲ. ತಮ್ಮ ಕೈಗೆ ಇ-ಸ್ವತ್ತುಗಳನ್ನು ತಲುಪಿಸಲಾಗುವುದು. ನಗರದಲ್ಲಿ 1001 ವಸತಿ ನಿರ್ಮಾಣಗಳ ಕಾರ್ಯ ನಡೆಯುತ್ತಿದೆ. ಇದರಲ್ಲಿ ಎಲ್ಲೂ ಫಲಾನುಭವಿಗಳ ಪುನಾರವರ್ತನೆ ಆಗದಂತೆ ಅರ್ಹ ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗುವುದು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ತಿಳಿಸಿದರು.

ರಸ್ತೆ ನಿರ್ಮಾಣಕ್ಕೆ ಭೂಮಿ ಪೂಜೆ: ಕಾರ್ಯಕ್ರಮಕ್ಕೂ ಮುನ್ನ ಶಾಸಕ ಕೆ.ಸಿ.ವೀರೇಂದ್ರಪಪ್ಪಿ,ಸರ್ಕಾರಿಬಾಲಕಿಯರ ಜ್ಯೂನಿಯರ್ ಕಾಲೇಜು ಹಿಂಭಾಗದ ರಸ್ತೆಯ, ನಗರಸಭೆ ಕ್ರಾಸ್‌ನಿಂದ ರಂಗಯ್ಯನ ಬಾಗಿಲು ಹತ್ತಿರದ ಗಣೇಶ ದೇವಸ್ಥಾನದ ಮುಂಭಾಗದವರೆಗೆ, ರೂ.57 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸುತ್ತಿರುವ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

## ಫಾಸ್ಟ್ ನ್ಯೂಸ್

### ಕುರಿ, ಮೇಕೆ ಘಟಕ ಪೂರೈಕೆ ಯೋಜನೆಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ಈ ವರ್ಷದ ಗಿರಿಜನ ಉಪಯೋಜನೆಯಡಿ ಕುರಿ 10 ಮತ್ತು ಮೇಕೆ 1 ಘಟಕ ಪೂರೈಕೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯು ನಿಗಮದಲ್ಲಿ ನೊಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡದ 18 ರಿಂದ 60 ವರ್ಷ ವಯೋಮಿತಿಯ ಮಹಿಳಾ ಸದಸ್ಯರು, ಅಥವಾ ಪುರುಷ ಸದಸ್ಯರುಗಳನ್ನು ಹಾಗೂ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳು ಇಲ್ಲದೇ ಇರುವ ಜಿಲ್ಲೆ, ತಾಲೂಕುಗಳಲ್ಲಿಯೂ ಕುರಿ ಸಾಕಾಣಿಕೆದಾರರುಗಳನ್ನು ಫಲಾನುಭವಿಗಳನ್ನಾಗಿ ಸರ್ಕಾರದಿಂದ ರಚಿಸಲಾಗಿರುವ ಜಿಲ್ಲಾ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು. ನಿಗದಿತ ಅರ್ಜಿಗಳನ್ನು ಆಯಾ ತಾಲೂಕು ಮಟ್ಟದ ಸಹಾಯಕ ನಿರ್ದೇಶಕರು, ಮುಖ್ಯ ಪಶುವೈದ್ಯಾಧಿಕಾರಿಗಳು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಡಿ.18 ರೊಳಗಾಗಿ ಸಲ್ಲಿಸಲು ನಿಗಮದ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಅಪರಿಚಿತ ಶವ ಪತ್ತೆ

» **ತುಮಕೂರು**

ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಜೆ.ಸಿ ರಸ್ತೆಯಲ್ಲಿರುವ ಜಿಲ್ಲಾಸ್ಪತ್ರೆ ಹಿಂಭಾಗದ ಗೇಟ್ ಬಳಿ ನವೆಂಬರ್ 19ರಂದು ಸುಮಾರು 40 ವರ್ಷದ ವ್ಯಕ್ತಿಯ ಶವವೊಂದು ಪತ್ತೆಯಾಗಿದ್ದು, ವಾರಸುದಾರರು ಯಾರೆಂದು ತಿಳಿದು ಬಂದಿರುವುದಿಲ್ಲ. ಮೃತನು 170 ಸೆಂ.ಮೀ. ಎತ್ತರ, ಕೋಲು ಮುಖ, ಎಣ್ಣೆ ಕೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಬಲ ಕೈ ನಲ್ಲಿ ಖಅಖಂಜಜ ಎಂದು ಅಚ್ಚೆ ಇರುತ್ತದೆ. ಮೃತನ ಮೈ ಮೇಲೆ ತಿಳಿ ನೀಲಿ ಬಣ್ಣದ ತುಂಬು ತೋಳಿನ ಶರ್ಟ್, ಸಿಮೆಂಟ್ ಮತ್ತು ಕಪ್ಪು ಬಣ್ಣದ ಲುಂಗಿ, ಭುಜದ ಮೇಲೆ ಕೇಸರಿ ಬಣ್ಣದ ಟವಲ್ ಇರುತ್ತದೆ. ಮೃತರ ವಾರಸುದಾರರು ಯಾರಾದರೂ ಇದ್ದಲ್ಲಿ ಹತ್ತಿರದ ಪೊಲೀಸ್ ಠಾಣೆ ಅಥವಾ ದೂ.ಸಂ. 0816-2278388 ಅಥವಾ ಮೊ.ಸಂ.9480802930-45-00ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

### ವಿದ್ಯಾರ್ಥಿ ವೇತನ ಸೌಲಭ್ಯ ಅವಧಿ ವಿಸ್ತರಣೆ

» **ಶಿವಮೊಗ್ಗ**

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಶುಲ್ಕ ಮರುಪಾವತಿ ಕಾರ್ಯಕ್ರಮ ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಸೌಲಭ್ಯ ನೀಡಲು ಆನ್‌ಲೈನ್ ಮೂಲಕ ಕರೆಯಲಾಗಿದ್ದ ಅರ್ಜಿ ಅವಧಿಯನ್ನು ಡಿ.20 ರವರೆಗೆ ವಿಸ್ತರಿಸಲಾಗಿದೆ. ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಹಾಗೂ ವೃತ್ತಿಪರ ಸ್ನಾತಕೋತ್ತರ ಪದವಿಗಳಿಗೆ ಹಾಗೂ ಪಿಯುಸಿ ಸಮಾನಾಂತರ(ಪಿಯು & ಸಮಾನಂತರ ಕೋರ್ಸ್‌ಗಳು) ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ ಸೌಲಭ್ಯಕ್ಕಾಗಿ https://ssp.postmartic.karnataka.gov.ಟಿ ವೆಬ್‌ಸೈಟ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ನ.30 ವರೆಗೆ ನಿಗದಿಪಡಿಸಲಾಗಿತ್ತು. ಇದೀಗ ಈ ಅವಧಿಯನ್ನು ಡಿಸೆಂಬರ್ 20 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿ ಹಾಗೂ ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ www.bcwd.karnataka.gov.in, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್ postmatrichelp@karnataka.gov.in, ದೂ.ಸಂ.: 1902, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ದೂ.ಸಂ.: 08182-222129 ಅಥವಾ ಸಹಾಯವಾಣಿ 8050770005 ಗಳನ್ನು ಸಂಪರ್ಕಿಸಬಹುದೆಂದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಶೇ.75 ರಷ್ಟು ಸಹಾಯಧನ

» **ಹೊಸಪೇಟೆ**

ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ 2024-25ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವೈಯಕ್ತಿಕ ಫಲಾನುಭವಿ, ಪಾಲುದಾರಿಕೆ ಸಂಸ್ಥೆ, ಕಂಪನಿ, ಜವಳಿ ಸಹಕಾರಿ ಸಂಘ, ಸಂಸ್ಥೆಗಳು ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿಸಣ್ಣ ಘಟಕಗಳನ್ನು ಪ್ರಾರಂಭಿಸಲು ಶೇ.75 ರಷ್ಟು ಬಂಡವಾಳ ಹೂಡಿಕೆ ಸಹಾಯಧನ ಒದಗಿಸಲಾಗುವುದು. ಜಿಲ್ಲೆಗೆ ಭೌತಿಕ 3 , ಗಿರಿಜನ ಉಪ ಯೋಜನೆಯಡಿ ಭೌತಿಕ 1 ಹೀಗೆ ಒಟ್ಟು 4 ಭೌತಿಕ ಗುರಿಯನ್ನು ನಿಗದಿಪಡಿಸಲಾಗಿದೆ.

# ಮಣ್ಣುಪರೀಕ್ಷೆಯ ನಂತರ ಉತ್ತಮ ಗುಣಮಟ್ಟದ ಬೆಳೆ ಬೆಳೆಯುವಂತೆ ಸಲಹೆ: ಜೆ.ಅಶೋಕ್

» **ಚಳ್ಳಕೆರೆ**

ಪ್ರತಿಯೊಬ್ಬ ರೈತರೂ ತಾವು ಬೆಳೆಯುವ ಜಮೀನಿನ ಮಣ್ಣಿನ ಗುಣಲಕ್ಷಣಗಳನ್ನು ಅರಿಯಲು ಮಣ್ಣು ಪರೀಕ್ಷೆ ಮಾಡಿಸಬೇಕು. ನಿಮ್ಮ ಜಮೀನಿನ ಮಣ್ಣು ಪರೀಕ್ಷೆಯಿಂದ ಮಣ್ಣಿನಲ್ಲಿ ಉಂಟಾಗುವ ಲೋಪದೋಷಗಳ ಬಗ್ಗೆ ಮಾಹಿತಿ ಪಡೆದು ಅದನ್ನು ಸರಿಪಡಿಸುವ ಪ್ರಾಮಾಣಿಕ ಪ್ರಯತ್ನ ಮಾಡಬಹುದು. ಕೃಷಿ ಇಲಾಖೆ ಈ ನಿಟ್ಟಿನಲ್ಲಿ ಎಲ್ಲಾ ರೈತ ಮಣ್ಣು ಪರೀಕ್ಷೆಯನ್ನು ಮಾಡಿಸಲು ಸಕಲಸಿದ್ದತೆ ಮಾಡಿಕೊಂಡಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ತಿಳಿಸಿದರು.

ಅವರು, ನಗರದ ಕೃಷಿ ಇಲಾಖೆ ಕಚೇರಿಯಲ್ಲಿ ವಿಶ್ವಮಣ್ಣು ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಕೃಷಿ ಇಲಾಖೆ ಸಹಯೋಗದೊಂದಿಗೆ ರೈತ ಜಮೀನುಗಳ ಮಣ್ಣು ಪರೀಕ್ಷೆ ನಡೆಯುತ್ತಲೇ ಇದೆ. ಆದರೆ, ಇತ್ತೀಚಿನ ದಿನಗಳಲ್ಲಿ ಸರ್ಕಾರ ಎಲ್ಲಾ ರೈತ ಜಮೀನುಗಳ ಮಣ್ಣು ಪರೀಕ್ಷೆ ನಡೆಸಲು ಸೂಚನೆ ನೀಡಿದ್ದು, ಈಗಾಗಲೇ ತಾಲ್ಲೂಕಿನ ಸಾವಿರಾರು ರೈತ ಜಮೀನಿನ ಮಣ್ಣು ಪರೀಕ್ಷೆಯನ್ನು ಇಲಾಖೆ ವತಿಯಿಂದ ಮಾಡಲಾಗಿದೆ ಎಂದರು.




ಪ್ರಾಸ್ತಾವಿಕವಾಗಿ ಮಾತನಾಡಿದ ಉಪಕೃಷಿ ನಿರ್ದೇಶಕ ಪ್ರಭಾಕರ, ಸರ್ಕಾರ ರೈತ ಸಮುದಾಯಕ್ಕೆ ಹಲವಾರು ಸೌಲಭ್ಯಗಳ ಜೊತೆಗೆ ಕೊಡುಗೆ ನೀಡುತ್ತಾ ಬಂದಿದೆ. ರೈತರು ತಮ್ಮ ಜಮೀನಿನ ಮಣ್ಣಿನ ಗುಣಲಕ್ಷಣ ಅರಿಯಲು ಮಣ್ಣು ಪರೀಕ್ಷೆಯನ್ನು ಜಾರಿಗೆ ತರಲಾಗಿದೆ. ತಾಲ್ಲೂಕಿನ ಎಲ್ಲಾ ರೈತರು ಜಮೀನಿನ ಮಣ್ಣಿನ ಪರೀಕ್ಷೆಯನ್ನು ನಡೆಸಿಕೊಳ್ಳುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ, ತಾಲ್ಲೂಕು ಅಧ್ಯಕ್ಷ ಶ್ರೀಕಂಠಮೂರ್ತಿ, ಅಖಂಡ ಕರ್ನಾಟಕ ರೈತ ಸಂಘದ ಅಧ್ಯಕ್ಷ ಚಿಕ್ಕಣ್ಣ, ರುದ್ರಮುನಿ, ಕೃಷಿ ಅಧಿಕಾರಿ ಜೀವನ್, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಬೆಂಬಲ ಬೆಲೆಯಲ್ಲಿ ರಾಗಿ ಮತ್ತು ಬಿಳಿಜೋಳ ಖರೀದಿ, ರಾಗಿ ಖರೀದಿಗೆ 5 ಕೇಂದ್ರಗಳ ಸ್ಥಾಪನೆ; ಜಿಲ್ಲಾಧಿಕಾರಿ

» **ದಾವಣಗೆರೆ**

ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ರಾಗಿ ಮತ್ತು ಜೋಳದ ಉತ್ಪನ್ನವನ್ನು ಖರೀದಿಸಲು ಜಿಲ್ಲೆಯ 5 ಕಡೆ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಮಂಗಳವಾರ(ಡಿ.3) ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಗಿ ಖರೀದಿ ಕೇಂದ್ರಗಳನ್ನು ದಾವಣಗೆರೆ, ಹರಿಹರ, ಹೊನ್ನಾಳಿ, ಜಗಳೂರು ಮತ್ತು ಚನ್ನಗಿರಿ ತಾಲ್ಲೂಕು ಎಪಿಎಂಸಿ ಆವರಣದಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ರಾಗಿ ಮತ್ತು ಜೋಳ ಮತ್ತು ಮಾಲ್ದಂಡಿ ಜೋಳ ಖರೀದಿಸಲಾಗುತ್ತದೆ. ಪ್ರತಿ ರೈತರಿಂದ ರಾಗಿಯನ್ನು ಎಕರೆಗೆ 1 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್ ರಾಗಿಯನ್ನು ಕ್ವಿಂಟಾಲ್‌ಗೆ ರೂ.4290 ರಂತೆ ಮತ್ತು ಬಿಳಿ ಜೋಳ ಉತ್ಪನ್ನವನ್ನು ಪ್ರತಿ ಎಕರೆಗೆ 10 ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಪ್ರತಿ' ಗರಿಷ್ಠ 150 ಕ್ವಿಂಟಾಲ್‌ನಷ್ಟು ಬಿಳಿಜೋಳ ಹೈಬ್ರೀಡ್ ಕ್ವಿಂಟಾಲ್‌ಗೆ ರೂ.3371 ರಂತೆ ಹಾಗೂ ಬಿಳಿಜೋಳ ಮಾಲ್ದಂಡಿ ಜೋಳವನ್ನು ಕ್ವಿಂಟಾಲ್‌ಗೆ ರೂ.3421 ಗಳಂತೆ ಎಫ್.ಎ.ಕ್ಯೂ ಗುಣಮಟ್ಟದ ಉತ್ಪನ್ನ ಖರೀದಿಸಲಾಗುವುದು. ಜೋಳವನ್ನು ಜಿಲ್ಲೆಯಲ್ಲಿ ಹೆಚ್ಚು ಬೆಳೆಯಲಾಗುತ್ತಿಲ್ಲವಾದ್ದರಿಂದ ಖರೀದಿ ಕೇಂದ್ರಗಳನ್ನು ಇದಕ್ಕಾಗಿ ತೆರೆದಿರುವುದಿಲ್ಲ. ರೈತರಿಂದ ರಾಗಿ ಖರೀದಿಸಲು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವನ್ನು ಖರೀದಿ ಏಜೆನ್ಸಿಯನ್ನಾಗಿ ನೇಮಕ ಮಾಡಲಾಗಿದೆ. ರಾಗಿ ಖರೀದಿಗೆ ಈಗಾಗಲೇ ರೈತರಿಂದ ನೊಂದಣಿಯನ್ನು ಪ್ರಾರಂಭಿಸಲಾಗಿದ್ದು 2025 ರ ಜನವರಿ 1 ರಿಂದ ಮಾರ್ಚ್ 31 ರ ವರೆಗೆ ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿ ಮಾಡಲಾಗುತ್ತದೆ. ರೈತರು ಬೆಳೆ ನಮೂದಿನೊಂದಿಗೆ ಎಫ್‌ಐಡಿಯೊಂದಿಗೆ ನೊಂದಣಿ ಮಾಡಿಸಲು ತಿಳಿಸಿದ್ದಾರೆ.

# ಡಿ.13ರಂದು ಬೆಳಗಾವಿ ಸುವರ್ಣ ಸೌಧ ಚಲೋ

» **ಬಳ್ಳಾರಿ**

ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಸೂಕ್ತ ಪ್ರಾತಿನಿಧ್ಯವನ್ನು ಪಡೆಯದೇ ಇರುವ 49 ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಅಲೆಮಾರಿ ಸಮುದಾಯ ಗಳಿಗೆ ಶೇ 3ರಷ್ಟು ಒಳಮೀಸಲಾತಿ ಕಲ್ಪಿಸುವುದು ಸೇರಿದಂತೆ ಹಲವಾರು ಬೇಡಿಕೆಗಳನ್ನು ಮುಂದಿಟ್ಟುಕೊಂಡು ಅಲೆಮಾರಿಗಳ ಮುಂದಿನ ಪೀಳಿಗೆಯ ಸ್ವಾಭಿಮಾನ, ಗೌರವ, ಘನತೆ ಮತ್ತು ನೆಮ್ಮದಿಯ ಬದುಕಿಗಾಗಿ ಪರಿಶಿಷ್ಟ ಜಾತಿ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಅಲೆಮಾರಿ ಸಮುದಾಯಗಳ ಒಳಮೀಸಲಾತಿ ಹೋರಾಟ ಸಮಿತಿ (ಪರಿಶಿಷ್ಟ ಜಾತಿ 49 ಅಲೆಮಾರಿ ಸಮುದಾಯಗಳ ಮಹಾ ಒಕ್ಕೂಟ)ಯು ಇದೇ ಡಿ.13 ರಂದು ಬೆಳಗಾವಿಯ ಸುವರ್ಣಸೌಧ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದೆ.ಈ ಕುರಿತು ಕರ್ನಾಟಕ ರಾಜ್ಯ ಎಸ್.ಸಿ., ಎಸ್.ಟಿ., ಅಲೆಮಾರಿ ಬುಡಕಟ್ಟು ಮಹಾಸಭಾದ ಜಿಲ್ಲಾಧ್ಯಕ್ಷ ಶಿವಕುಮಾರ್ ವೈ. ಅವರು ಮಾಹಿತಿ ನೀಡಿದ್ದು, ಹೆಚ್ಚಿನ ಜನಸಂಖ್ಯೆ ಹಾಗೂ ಪ್ರಬಲ ಅಲೆಮಾರಿ ಸಮುದಾಯಗಳಾದ ಕೊರಮ ಮತ್ತು ಕೊರಚ ಸಮುದಾಯಗಳನ್ನು ಹಾಲಿ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಬೇರ್ಪಡಿಸಿ, 49 ಸೂಕ್ಷ್ಮ ಮತ್ತು 63 ಸೂಕ್ಷ್ಮ ಅಲೆಮಾರಿ ಸಮುದಾಯಗಳಿಗೆ ನ್ಯಾಯ ಒದಗಿಸಲು ಮನವಿ ಮಾಡಲು ಈ ಸುವರ್ಣ ಸೌಧ ಚಲೋ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ಶಿವಮೊಗ್ಗ'** ನಗರದ ಎಲೆರೇವಣ್ಣ ಕೇರಿ ರಸ್ತೆಯಲ್ಲಿ ಕಂಬಗಳನ್ನು ಬದಲಿಸುವ ಕಾಮಗಾರಿ ಇರುವುದರಿಂದ ಡಿ.6 ರಂದು ಬೆಳಗ್ಗೆ 9 ರಿಂದ ಸಂಜೆ 6 ರವರೆಗೆ ಗಾಂಧಿಬಜಾರ್, ಎಲೆರೇವಣ್ಣ ಕೇರಿ, ನಾಗಪ್ಪಕೇರಿ, ಅಶೋಕರಸ್ತೆ, ತುಳುಜಾ ಭವಾನಿ ರಸ್ತೆ, ಅನವೇರಪ್ಪ ಕೇರಿ, ಸಾವರ್ಕರ್ ರಸ್ತೆ, ಲಷ್ಕರ್ ಮೊಹಲ್ಲಾ, ಮೀನು ಮಾರುಕಟ್ಟೆ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

**ಪ್ರಮುಖ ಸುದ್ದಿ**

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಎಸ್.ಜೆ.ಸೋಮಶೇಖರ್ ಸೂಚನೆ

# ಕರ ವಸೂಲಾತಿ ಹೆಚ್ಚಿನ ಪ್ರಗತಿ ಸಾಧಿಸಿ; ಸಿಇಒ

» **ಚಿತ್ರದುರ್ಗ**

ಕಡಿಮೆ ಕರ ವಸೂಲಾತಿ ಮಾಡಿದ ಗ್ರಾಮ ಪಂಚಾಯಿತಿಗಳಲ್ಲಿ ಜಾಗೃತಿ ಜಾಥಾ, ಟಾಂ ಟಾಂ, ಸ್ವಚ್ಛ ವಾಹಿನಿ ಆಟೋ ಮೂಲಕ ಹೆಚ್ಚು ಹೆಚ್ಚು ಪ್ರಚಾರಗೊಳಿಸಿ, ಕರ ವಸೂಲಾತಿ ಕಡಿಮೆ ಇರುವ ಗ್ರಾಮ ಪಂಚಾಯಿತಿಗಳು ಹೆಚ್ಚಿನ ಪ್ರಗತಿ ಸಾಧಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಗ್ರಾಮ ಪಂಚಾಯಿತಿಗಳಲ್ಲಿ ಕಡಿಮೆ ಕರ ವಸೂಲಾತಿ ಮಾಡಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಕರ ವಸೂಲಿಗಾರರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ 189 ಗ್ರಾಮ ಪಂಚಾಯಿತಿಗಳಲ್ಲಿ ಇಲ್ಲಿವರೆಗೂ ಶೇ.33.80ರಷ್ಟು ಪ್ರಗತಿ ಸಾಧಿಸಲಾಗಿದ್ದು, ಜಿಲ್ಲಾವಾರು ಪ್ರಗತಿಗೆ ಹೋಲಿಸಿದಾಗ ಚಿತ್ರದುರ್ಗ ಜಿಲ್ಲೆಯು ತುಂಬಾ ಕಡಿಮೆ ಪ್ರಗತಿ ಸಾಧಿಸಲಾಗಿದೆ. ಆದ್ದರಿಂದ ಕಡಿಮೆ ಕರ ವಸೂಲಾತಿ ಮಾಡಿದ ಗ್ರಾಮ ಪಂಚಾಯಿತಿಗಳಲ್ಲಿ ಜಾಥಾ ಮೂಲಕ, ಟಾಂ ಟಾಂ ಮೂಲಕ, ಸ್ವಚ್ಛ ವಾಹಿನಿ ಆಟೋ ಮೂಲಕ ಹೆಚ್ಚು ಹೆಚ್ಚು ಪ್ರಚಾರಗೊಳಿಸಬೇಕು. ಹಾಗೆಯೇ ಪ್ರತಿ ಮನೆ ಮನೆಗೂ ಭೇಟಿ ನೀಡಿ ಗ್ರಾಮಸ್ಥರ ಮನವೊಲಿಸಿ, ಹೆಚ್ಚಿನ ತೆರಿಗೆ ಸಂಗ್ರಹಣೆ ಮಾಡಲು ಸೂಚನೆ ನೀಡಿದ ಅವರು, ಇನ್ನೂ ಒಂದು ತಿಂಗಳೊಳಗೆ ಕಡ್ಡಾಯವಾಗಿ ಶೇ.80ರಷ್ಟು ಕರ ವಸೂಲಾತಿ ಹೆಚ್ಚಾಗಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.



ಗ್ರಾಮ ಪಂಚಾಯಿತಿಗಳಲ್ಲಿ ಹೆಚ್ಚಿನ ಕರ ವಸೂಲಿ ಮಾಡಿದ ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಬಿಲ್ ಕಲೆಕ್ಟರ್‌ಗಳನ್ನು ಜಿಲ್ಲಾ ಪಂಚಾಯಿತಿ ವತಿಯಿಂದ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಕರ ವಸೂಲಾತಿಯಲ್ಲಿ ಕಡಿಮೆ ಪ್ರಗತಿ ಸಾಧಿಸಿದ ಪಿಡಿಒ ಹಾಗೂ ಬಿಲ್ ಕಲೆಕ್ಟರ್‌ಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆಯನ್ನೂ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ., ಸಹಾಯಕ ಕಾರ್ಯದರ್ಶಿ ಎನ್.ರವಿ, ಸಹಾಯಕ ನಿರ್ದೇಶಕ (ಆಡಳಿತ) ದಾದಾಪೀರ್, ಸಹಾಯಕ ಡಿಪಿಎಂಯು ಸೈಯಿದಾ ಪಿಜಾ ಇರಮ್ ಇದ್ದರು.

## ಫಾಸ್ಟ್ ನ್ಯೂಸ್

### 14 ರಂದು ಲೋಕ ಅದಾಲತ್

» ಹಾವೇರಿ

ಹಾವೇರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಡಿಸೆಂಬರ್ 14 ರಂದು ಬೆಳಿಗ್ಗೆ 10.30 ಗಂಟೆಗೆ ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ನೋಂದಣಾಧಿಕಾರಿ ಮತ್ತು ಸಹಾಯಕ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ. ಗ್ರಾಹಕರ ಆಯೋಗದಲ್ಲಿ ಬಾಕಿ ಇರುವ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಸಂಧಾನದ ಮೂಲಕ ಇತ್ಯರ್ಥಮಾಡಿಕೊಳ್ಳಲು ಅವಕಾಶವಿದ್ದು, ಪ್ರಕರಣಗಳಿಗೆ ಸಂಬಂಧಿಸಿದ ಪಕ್ಷಗಾರರು ಅವರ ವಕೀಲರ ಮೂಲಕ ಹಾಜರಾಗಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿಗಳಿಂದ ಅರ್ಜಿ

» ಹಾವೇರಿ

ಶುಲ್ಕ ಮರುಪಾವತಿ ಸೌಲಭ್ಯಕ್ಕೆ ಮೆಟ್ರಿಕ್ ನಂತರದ ಹಾಗೂ ಮೆರಿಟ್ □ಕಂ-ಮೀನ್ಸ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿಸಬೇಕು. ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಕನಿಷ್ಠ ಶೇ.50 ರಷ್ಟು ಅಂಕ ಪಡೆದಿರಬೇಕು. ಮೆಟ್ರಿಕ್ ನಂತರದ ಕೋರ್ಸುಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.2 ಲಕ್ಷ ಹಾಗೂ ಮೆರಿಟ್-ಕಂ-ಮೀನ್ಸ್ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದೊಳಗಿರಬೇಕು. ಅರ್ಹ ವಿದ್ಯಾರ್ಥಿಗಳು ಎಸ್.ಎಸ್.ಪಿ.ಪೋರ್ಟ್ https://ssp.postmatric.karnataka.gov.in ನಲ್ಲಿ 31 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಅಥವಾ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾವೇರಿ ದೂ.08375-234505 ಸಂಪರ್ಕಿಸಬಹುದೆಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರೋತ್ಸಾಹಧನ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

» ಹಾವೇರಿ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರೋತ್ಸಾಹಧನ ಸೌಲಭ್ಯಕ್ಕೆ ಬಿಎಸ್ಸಿ ನರ್ಸಿಂಗ್ ಹಾಗೂ ಜಿಎನ್‌ಎಂ ನರ್ಸಿಂಗ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ. ವಿದ್ಯಾರ್ಥಿಗಳು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿಸಬೇಕು. ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದೊಳಗಿರಬೇಕು. ಅರ್ಹ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in/ Sevasindhu/ DepartmentServicesಮೂಲಕದಿನಾಂಕ 31-12-2024ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಅಥವಾ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾವೇರಿ ಈ ವಿಳಾಸದಲ್ಲಿ ಸಂಪರ್ಕಿಸಬಹುದೆಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹಾಪರಿನಿರ್ವಾಣ ಕಾರ್ಯಕ್ರಮ ಡಿ.6 ರಂದು

» ಹಾವೇರಿ

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 68ನೇ ಮಹಾ ಪರಿನಿರ್ವಾಣ ದಿನಾಚರಣೆ (ಪುಣ್ಯ ಸ್ಮರಣೆ)ಅಂಗವಾಗಿ ಡಿಸೆಂಬರ್ 6 ರಂದು ಬೆಳಿಗ್ಗೆ 10-30ಕ್ಕೆ ಹಾವೇರಿ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ 68ನೇ ಮಹಾ ಪರಿನಿರ್ವಾಣ ದಿನಾಚರಣೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ತಿಳಿಸಿದ್ದಾರೆ.

### ಡಿ.11 ರಂದು ಪ್ರಗತಿ ಪರಿಶೀಲನಾ ಸಭೆ

» ಹಾವೇರಿ

ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಪ್ರಗತಿ ಪರಿಶೀಲನಾ ಸಭೆ ಡಿ.11 ರಂದು ಮಧ್ಯಾಹ್ನ 4 ಗಂಟೆಗೆ ಹಾಗೂ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ 1989ರನ್ವಯ ಜಿಲ್ಲಾ ಮಟ್ಟದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ಕುಂದುಕೊರತೆ ಸಭೆ ಮಧ್ಯಾಹ್ನ 4-30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಲಿದೆ.

ಚರ್ಮದ ಮಂಡಿ ಮತ್ತು ಕುಲುಮೆ ರಸ್ತೆಯ ಜಾಗಕ್ಕೆ ಭೇಟಿ ನೀಡಿ ಪರಿಶೀಲನೆ

# ವಕ್ಫ್ ವಿವಾದ: ಚಳ್ಳಕೆರೆ ನಗರಕ್ಕೆ ರಾಜ್ಯ ಬಿಜೆಪಿ ಸಂಶೋಧನಾ ತಂಡ ಭೇಟಿ

» ಚಳ್ಳಕೆರೆ

ದಲಿತರಿಗೆ ಸೇರಿದ ಜಾಗವನ್ನು ಯಾವುದೇ ಕಾರಣಕ್ಕೂ ಬೇರೆಯವರಿಗೆ ಹೋಗಲು ಬಿಡುವುದಿಲ್ಲವೆಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿನಾರಾಯಣಸ್ವಾಮಿ ಹೇಳಿದರು.

ಅವರು, ನಗರದ ಬೆಂಗಳೂರು ರಸ್ತೆಯ ಕಬರಸ್ತಾನ ಹಾಗೂ ಗಾಂಧಿನಗರದ ಚರ್ಮದ ಮಂಡಿ ಭೇಟಿ ನೀಡಿ ಮಾತನಾಡಿ, ಚರ್ಮಮಂಡಿ ಮತ್ತು ಕಬರಸ್ಥಾನ ಎರಡೂ ಆಸ್ತಿಗಳು ಚರ್ಮದ ಮಂಡಿ ಹೆಸರಿನಲ್ಲಿವೆ, ನ್ಯಾಯಾಲಯಕ್ಕೆ ಹೋದರೂ ಯಾವುದೇ ಆದೇಶವಿಲ್ಲ. ಆದರೂ ನಗರಸಭೆ ಆಡಳಿತ ಈ ನಿಟ್ಟಿನಲ್ಲಿ ಸೂಕ್ತ ಕ್ರಮವಹಿಸಿಲ್ಲ. ಕೂಡಲೇ ನಗರಸಭೆ ಆಡಳಿತ ಈ ಎರಡೂ ಆಸ್ತಿಗಳನ್ನು ಮಾದಿಗ ಸಮುದಾಯಕ್ಕೆ ಹಸ್ತಾಂತರ ಮಾಡಬೇಕು. ಒತ್ತುವರಿಯಾಗಿದ್ದಲ್ಲಿ ಪೊಲೀಸ್ ಸಹಕಾರದಿಂದ ಖುಲ್ಲಾಪಡಿಸಿಕೊಡಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲಾ ಮಾದಿಗ ಮಹಾಸಭಾ ಅಧ್ಯಕ್ಷ ಮಾಜಿ ಪುರಸಭಾ ಸದಸ್ಯ ಎಂ.ಶಿವಮೂರ್ತಿ ಮಾತನಾಡಿ, ಬೆಂಗಳೂರು ರಸ್ತೆಯಕಬರಸ್ತಾನ ಹಾಗೂ ಗಾಂಧಿನಗರದ ಚರ್ಮದ ಮಂಡಿ 1962ರಲ್ಲಿ ಮಾದಿಗ ಸಮುದಾಯಕ್ಕೆ ಚರ್ಮ ಹದಮಾಡುವ ಮತ್ತು ಮಾರಾಟ ಮಾಡುವ ಉದ್ದೇಶದಿಂದ ನೀಡಲಾಗಿದೆ. ನಾವು ಜಾಗಕ್ಕೆ ಕಂದಾಯ ಕಟ್ಟುತ್ತಾ ಬಂದಿದ್ದರೂ ಸಹ ಜಾಗವನ್ನು ವಕ್ಫ್ ಬೋರ್ಡ್ ಹೆಸರಿಗೆ ಮಾಡಿಸಿಕೊಡುವಂತೆ ಅರ್ಜಿ ನೀಡಲಾಗಿದೆ. ನಾವು ಯಾವುದೇ ಅರ್ಜಿ ನೀಡಿಲ್ಲ, ಅದು ನಕಲು ಎಂದು ಮುಸ್ಲಿಂ ಸಮುದಾಯವೇ ಮತ್ತೆ ಸ್ಪಷ್ಟಣೆ ನೀಡಿದೆ ಎಂದಾಗ. ಛಲವಾದಿ ನಾರಾಯಣಸ್ವಾಮಿ, ತಹಶೀಲ್ದಾರ್ ರೇಹಾ□□ಪಾಷ, ಪೌರಾಯುಕ್ತ ಜಗರೆಡ್ಡಿ, ವ್ಯವಸ್ಥಾಪಕ ಲಿಂಗರಾಜ್ ಸೂಚಿಸಿ, ನಗರಸಭೆ ಸದರಿ ಎರಡೂ ಜಾಗಗಳು ಮಾದಿಗ ಸಮುದಾಯದ ಹೆಸರಿನಲ್ಲಿದ್ದು, ಈ ಬಗ್ಗೆ ಕಳೆದ ವರ್ಷ ವಕ್ಫ್ ಬೋ□□□□ಗೆ ಸೇರಿದಂತೆ ಅರ್ಜಿ ನೀಡಿ, ನ್ಯಾಯಾಲಯಕ್ಕೂ ಸಹ ಮೊರೆ ಹೋಗಿದ್ದಾರೆ. ಸಮುದಾಯದ ಜಾಗವನ್ನು ಸಮುದಾಯಕ್ಕೆ ಮೀಸಲಾಗಿರಲಿ. ಮೂಲಖಾತೆದಾರರಾದ ಮಾದಿಗ ಸಮುದಾಯಕ್ಕೆ ರಕ್ಷಣೆ ನೀಡಿ ಕೂಡಲೇ ಆಸ್ತಿಯನ್ನು ನಮಗೆ ನೀಡಬೇಕು. ವಿಳಂಬ ನೀತಿ ಅನುಸುವುದು ಬೇಡ ಎಂದರು.

ವಿಧಾನಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿ, ಕೆ.ಎಸ್.ನವೀನ್, ಬಿಜೆಪಿ ಹಿರಿಯ ಮುಖಂಡ ಮುನಿಸ್ವಾಮಿ, ಜಿಲ್ಲಾಧ್ಯಕ್ಷ ಎ.ಮುರುಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಮಾಜಿಶಾಸಕ ಎಸ್.ತಿಪ್ಪೇಸ್ವಾಮಿ, ಕೆ.ಟಿ.ಕುಮಾರಸ್ವಾಮಿ, ಬಿಜೆಪಿ ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ಬಸವರಾಜು, ರೈತ ಮೋರ್ಚಾ ಅಧ್ಯಕ್ಷ ಕೆ.ಎಸ್.ನವೀನ್, ಡಿ.ಎಂ.ತಿಪ್ಪೇಸ್ವಾಮಿ, ಡಿ.ಸೋಮಶೇಖರಮಂಡಿಮಠ, ಪಿ.ರಾಮಕೃಷ್ಣರೆಡ್ಡಿ, ಜಯಪಾಲಯ್ಯ, ಮಾತೃಶ್ರೀಎನ್.ಮಂಜುನಾಥ್, ಹೊಟ್ಟೆಪ್ಪನಹಳ್ಳಿಕಾಂತರಾಜ್ ಮುಂತಾದವರು ಉಪಸ್ಥಿತರಿದ್ದರು.





# ಕರ್ನಾಟಕ ಲೋಕಸೇವಾ ಆಯೋಗದಿಂದ ಡಿಸೆಂಬರ್ 7 ಮತ್ತು 8 ರಂದು ಪಿ.ಡಿ.ಓ ಪರೀಕ್ಷೆ

» ದಾವಣಗೆರೆ

ಕರ್ನಾಟಕ ಲೋಕಸೇವಾ ಆಯೋಗದಿಂದ ಡಿಸೆಂಬರ್ 7 ಮತ್ತು 8 ರಂದು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರೂಪ್ ಸಿ ಹುದ್ದೆಗಳಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ 150 ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಪರೀಕ್ಷೆ ವೇಳೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಪರೀಕ್ಷಾ ಅವ್ಯವಹಾರಕ್ಕೆ ಅವಕಾಶ ನೀಡದೆ ಕಟ್ಟುನಿಟ್ಟಿನ ಪರೀಕ್ಷೆ ನಡೆಸಲು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಸೂಚಿಸಿದರು.

ಬುಧುವಾರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಿ.7 ರಂದು ಜಿಲ್ಲೆಯ 22 ಪರೀಕ್ಷಾ ಕೇಂದ್ರಗಳಲ್ಲಿ 9198 ಅಭ್ಯರ್ಥಿಗಳು ಮತ್ತು ಡಿ.8 ರಂದು 27 ಪರೀಕ್ಷಾ ಕೇಂದ್ರಗಳಲ್ಲಿ 11749 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಯಲ್ಲಿ ಭಾಗವಹಿಸಲಿರುವ ಎಲ್ಲಾ ಪರೀಕ್ಷಾರ್ಥಿಗಳು ಪರೀಕ್ಷಾ ಕೇಂದ್ರದೊಳಗೆ ಸ್ಮಾರ್ಟ್ ವಾಚ್, ಮೊಬೈಲ್, ಕ್ಯಾಲ್ಕುಲೇಟರ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ.

ಡಿ.7 ರಂದು ಮಧ್ಯಾಹ್ನ 2 ರಿಂದ 4 ಗಂಟೆಯವರೆಗೆ ಕನ್ನಡ ಭಾಷಾ ಪರೀಕ್ಷೆ, ಡಿ.8 ರಂದು ಬೆಳಿಗ್ಗೆ 10 ರಿಂದ 11.30 ರವರೆಗೆ ಪತ್ರಿಕೆ-1 ಸಾಮಾನ್ಯ ಜ್ಞಾನ, ಮಧ್ಯಾಹ್ನ 2 ರಿಂದ 4 ಗಂಟೆಯವರೆಗೆ ಪತ್ರಿಕೆ-2, ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲೀಷ್, ಕಂಪ್ಯೂಟರ್ ಜ್ಞಾನ ವಿಷಯದ ಕುರಿತು ಪರೀಕ್ಷೆ ಇರುತ್ತದೆ. ಪರೀಕ್ಷೆಗಳು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರದ 200ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ. ಮತ್ತು ಸುತ್ತಮುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಮುಚ್ಚುವಂತೆ ಹಾಗೂ ಕೇಂದ್ರದ ಸುತ್ತಮುತ್ತಲ ಪ್ರದೇಶದಲ್ಲಿ ಈಗಾಗಲೇ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದರು.

ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಲಾದ ಅಧಿಕಾರಿಗಳು, ಮೇಲ್ವಿಚಾರಕರು ಪರೀಕ್ಷಾ ಕೇಂದ್ರಗಳಲ್ಲಿ ಎರಡು ಗಂಟೆ ಮುಂಚಿತವಾಗಿ ಹಾಜರಿರಬೇಕು. ಪ್ರಶ್ನೆಪತ್ರಿಕೆ ಮತ್ತು ಓಎಂಆರ್ ಶೀಟ್‌ಗಳನ್ನು ಸರಿಯಾದ ಸಮಯಕ್ಕೆ ಪರೀಕ್ಷಾರ್ಥಿಗಳಿಗೆ ವಿತರಿಸಬೇಕು. ಯಾವುದೇ ಕಾರಣಕ್ಕೂಪರೀಕ್ಷಾಸಮಯದಲ್ಲಿಮೇಲ್ವಿಚಾರಕರು ಮೊಬೈಲ್ ಬಳಸಬಾರದು ಮತ್ತು ಡ್ರೆಸ್‌ಕೋಡ್ ಅನುಸರಿಸಬೇಕೆಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಕೊಟ್ರೇಶ್.ಜಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕರಿಸಿದ್ದಪ್ಪ, ಉಪಸ್ಥಿತರಿದ್ದರು



# 13ನೇ ಅಥ್ಲೆಟಿಕ್ಸ್ ಕ್ರೀಡಾಕೂಟದ ವಿಜೇತರಿಗೆ ಬಹುಮಾನ ವಿತರಣೆ



» ಚಿತ್ರದುರ್ಗ

ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ನಿರ್ದೇಶಕರುಗಳ ಕೊರತೆಯಿರುವುದನ್ನು ವಿಧಾನಸಭೆ ಅಧಿವೇಶನದಲ್ಲಿ ಚರ್ಚಿಸಿ ಕ್ರೀಡಾ ಸಚಿವರ ಗಮನ ಸೆಳೆಯುವುದಾಗಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಭರವಸೆ ನೀಡಿದರು. ಸ್ಟೇಡಿಯಂನಲ್ಲಿ ಮೂರು ದಿನಗಳ ಕಾಲ ನಡೆದ ದಾವಣಗೆರೆ ವಿಶ್ವವಿದ್ಯಾನಿಲಯ ಅಂತರ ಕಾಲೇಜು ಪುರುಷರ ಹಾಗೂ ಮಹಿಳೆಯರ 13 ನೇ ಅಥ್ಲೆಟಿಕ್ಸ್ ಕ್ರೀಡಾಕೂಟ ಮತ್ತು ದಾವಣಗೆರೆ ವಿಶ್ವವಿದ್ಯಾನಿಲಯದ ತಂಡದ ಆಯ್ಕೆ-2024 ಮುಕ್ತಾಯ ಸಮಾರಂಭದಲ್ಲಿ ಗುರುವಾರ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಕ್ರೀಡಾಪಟುಗಳಿಗೆ ಮೂಲಭೂತ ಸೌಲಭ್ಯಗಳ ಕೊರತೆಯಿದೆಯೆಂದು ದೈಹಿಕ ಶಿಕ್ಷಣ ನಿರ್ದೇಶಕರುಗಳು ನನ್ನ ಗಮನಕ್ಕೆ ತಂದಿದ್ದಾರೆ. ಮುಂದಿನ ದಿನಗಳಲ್ಲಿ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಿ ಪ್ರೋತ್ಸಾಹ ನೀಡಲಾಗುವುದು. ಸ್ಟೇಡಿಯಲ್ಲಿ ಒಂದು ಕೋಟಿ ರೂ. ವೆಚ್ಚದಲ್ಲಿ ಕ್ಲೈಂಬಿಂಗ್ ವಾಲ್ ನಿರ್ಮಿಸಲಾಗುವುದು. ನಾಲ್ಕು ಗೋಡೆಗಳ ನಡುವೆ ಶಿಕ್ಷಣ ಕಲಿಯುವುದರ ಜೊತೆಗೆ ಕ್ರೀಡೆಗೂ ಹೆಚ್ಚಿನ ಮಹತ್ವ ಕೊಡಬೇಕಾಗಿರುವುದರಿಂದ ಪೋಷಕರುಗಳು ತಮ್ಮ ಮಕ್ಕಳ ಕ್ರೀಡೆಗೆ ಉತ್ತೇಜನ ನೀಡುವಂತೆ ಮನವಿ ಮಾಡಿದರು. ದಾವಣಗೆರೆ ವಿಶ್ವವಿದ್ಯಾನಿಲಯದ ಕ್ರೀಡಾಪಟುಗಳು ಒಳ್ಳೆಯ ಸಾಧನೆ ಮಾಡಿ ಒಲಂಪಿಕ್ಸ್‌ನಲ್ಲಿ ಪಾಲ್ಗೊಳ್ಳುವಂತಾಗಬೇಕು. ತಂದೆ-ತಾಯಿಗಳು ನಿಮ್ಮ ಮೇಲೆ ನಂಬಿಕೆಯಿಟ್ಟು ಕಳಿಸಿದ್ದಾರೆ. ಅದನ್ನು ಉಳಿಸಿಕೊಳ್ಳಿ ಎಂದು ಶಾಸಕ ಕೆ.ಸಿ.ವೀರೇಂದ್ರಪಪ್ಪಿ ವಿನಂತಿಸಿದರು. ಸಂತೆಬೆನ್ನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಹೆಚ್.ಗಿರಿಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಪ್ರಾಂಶುಪಾಲರಾದ ಸಂಗೇನಹಳ್ಳಿ ಅಶೋಕ್‌ಕುಮಾರ್, ಕಾಲೇಜು ಅಭಿವೃದ್ದಿ ಸಮಿತಿ ಕಾರ್ಯಾಧ್ಯಕ್ಷ ಎಂ.ಸಿದ್ದಪ್ಪ, ನಿವೃತ್ತ ಪ್ರಾಂಶುಪಾಲರಾದ ಡಾ.ಸಿ.ಶಿವಲಿಂಗಪ್ಪ ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯ ಹೆಚ್.ತಿಪ್ಪೇಸ್ವಾಮಿ, ಸಿಂಡಿಕೇಟ್ ಸದಸ್ಯ ದ್ಯಾಮಪ್ಪ, ಡೀನ್ ಹಾಗೂ ಪ್ರಭಾರೆ ದೈಹಿಕ ಶಿಕ್ಷಣ ನಿರ್ದೇಶಕ ಡಾ.ವೆಂಕಟೇಶ್ ಕೆ. ಸರ್ಕಾರಿಕಲಾಕಾಲೇಜುಪ್ರಾಂಶುಪಾಲರಾದಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಇನ್ನು ಅನೇಕರು ವೇದಿಕೆಯಲ್ಲಿದ್ದರು.

# ದಾವಣಗೆರೆಯ ಕವಿತಾಗೆ ಉತ್ತಮ ಅಥ್ಲೆಟಿಕ್ಸ್ ಪ್ರಶಸ್ತಿ

» ಚಿತ್ರದುರ್ಗ

ಇಲ್ಲಿನ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಮೂರು ದಿನಗಳ ಕಾಲ ನಡೆದ ದಾವಣಗೆರೆ ವಿಶ್ವವಿದ್ಯಾನಿಲಯದ ಅಂತರ ಕಾಲೇಜುಗಳ ಪುರುಷ ಹಾಗೂ ಮಹಿಳೆಯರ 13 ನೇ ಅಥ್ಲೆಟಿಕ್ಸ್ ಕ್ರೀಡಾಕೂಟ ಮತ್ತು ದಾವಣಗೆರೆ ವಿಶ್ವವಿದ್ಯಾನಿಲಯ ತಂಡದ ಆಯ್ಕೆಯಲ್ಲಿ ಪುರುಷರ ವಿಭಾಗದಲ್ಲಿ ಹರಿಹರ ಪ್ರಥಮ ದರ್ಜೆ ಕಾಲೇಜು ಚಾಂಪಿಯನ್ ಆಗಿ ಹೊರ ಹೊಮ್ಮಿತು.ಮಹಿಳೆಯರ ವಿಭಾಗದಲ್ಲಿ ಬಾಪೂಜಿ ದೈಹಿಕ ಶಿಕ್ಷಣ ಕಾಲೇಜು ದಾವಣಗೆರೆ ಚಾಂಪಿಯನ್.ಸಮಗ್ರ ಪ್ರಶಸ್ತಿಯನ್ನು ಬಾಪೂಜಿ ದೈಹಿಕ ಶಿಕ್ಷಣ ಕಾಲೇಜು ದಾವಣಗೆರೆ ಗಿಟ್ಟಿಸಿಕೊಂಡಿತು.

ಪುರುಷರ ವಿಭಾಗದಲ್ಲಿ ಸರ್ಕಾರಿ ಕಲಾ ಕಾಲೇಜು ಚಿತ್ರದುರ್ಗದ ಲೋಹಿಯಾ ಬೆಸ್ಟ್ ಅಥ್ಲೆಟಿಕ್ಸ್ ಆಗಿ ಹೊರಹೊಮ್ಮಿದರು. ಮಹಿಳಾ ವಿಭಾಗದಲ್ಲಿ ಬಾಪೂಜಿ ದೈಹಿಕ

ಶಿಕ್ಷಣ ಕಾಲೇಜು ದಾವಣಗೆರೆಯ ಕವಿತಾ ಉತ್ತಮ ಅಥ್ಲೆಟಿಕ್ಸ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡರು.

## ಪ್ರಮುಖ ಸುದ್ದಿ

ಜಾನುಕೊಂಡ: ತಾಯಂದಿರ ಸಭೆಯಲ್ಲಿ ಟಿ ಹೆಚ್ ಒ ಡಾ.ಬಿ.ವಿ.ಗಿರೀಶ್ ಸಲಹೆ

# ಮಕ್ಕಳಿಗೆ ಲಸಿಕೆಗಳು ಎದೆ ಹಾಲಿನಷ್ಟೇ ಮಹತ್ವ ಹೊಂದಿವೆ

ಚಿತ್ರದುರ್ಗ(ಕರ್ನಾಟಕ ವಾರ್ತೆ)ಡಿ.05:

ಮಕ್ಕಳಿಗೆ ನೀಡುವ ಲಸಿಕೆಗಳು ಎದೆಹಾಲಿನಷ್ಟೇ ಮಹತ್ವವಾಗಿವೆ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಪಂಡರಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಜಾನುಕೊಂಡ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ, ಗರ್ಭಿಣಿಯರಿಗೆ ಲಸಿಕಾ ಅಧಿವೇಶನ ಕಾರ್ಯಕ್ರಮದಲ್ಲಿ ಲಸಿಕಾ ಅಧಿವೇಶನ ಮೇಲ್ವಿಚಾರಣೆ ನಡೆಸಿ, ತಾಯಂದಿರ ಸಭೆಯಲ್ಲಿ ಅವರು ಮಾತನಾಡಿದರು.

ತಪ್ಪದೇ ನಿಮ್ಮ ಮಕ್ಕಳಿಗೆ ಲಸಿಕೆಯನ್ನು ಹಾಕಿಸುವುದು ಮರೆಯಬೇಡಿ. 12 ಮಾರಕ ರೋಗಗಳ ವಿರುದ್ಧ ರೋಗ ನಿರೋಧಕ ಶಕ್ತಿ ನಿಮ್ಮ ಮಕ್ಕಳು ಪಡೆಯುತ್ತದೆ. ಕಾಲಕಾಲಕ್ಕೆ ತಾಯಿ ಕಾರ್ಡ್‌ನಲ್ಲಿ ನಮೂದಿಸಿದಂತೆ ನಿಮ್ಮ ಮಕ್ಕಳನ್ನು ಲಸಿಕಾ ಸತ್ರಕ್ಕೆ ಕರೆತನ್ನಿ ಲಸಿಕೆಯನ್ನು ಕೊಡಿಸಿ ಎಂದರು.


ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ತಾಯಿ ಕಾರ್ಡಿನಲ್ಲಿ ಗರ್ಭಿಣಿ ಆರೈಕೆ, ಮಕ್ಕಳ ಆರೈಕೆ, ಬಾಣಂತಿ ಆರೈಕೆ, ಗರ್ಭಿಣಿ ಸ್ತೀಯರಿದ್ದಾಗ ಯಾವ ಪೌಷ್ಟಿಕ ಆಹಾರ ಸೇವಿಸಬೇಕು. ಹೆರಿಗೆ ಸಮಯದಲ್ಲಿ ಯಾವ ರೀತಿ ಪೂರ್ವ ಸಿದ್ಧತೆ ಮಾಡಿಕೊಳ್ಳಬೇಕು. ಮಕ್ಕಳಿಗೆ ಕಾಲಕಾಲಕ್ಕೆ ಕೊಡಿಸಬೇಕಾದ ಲಸಿಕಾ ವಿವರ ಮತ್ತು ವೇಳಾಪಟ್ಟಿಯನ್ನು ವಿವರಿಸಲಾಗಿದೆ. ಎಲ್ಲಾ ತಾಯಂದಿರು ತಮ್ಮ ತಮ್ಮ ತಾಯಿ ಕಾರ್ಡ್‌ನ್ನು ಸಂಪೂರ್ಣವಾಗಿ ಓದಿಕೊಳ್ಳಿ ಎಂದರು.

ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಮಮತಾ ಮಾತನಾಡಿ, ರಾಷ್ಟ್ರೀಯ ಜಂತುಹುಳು ನಿವಾರಣ ದಿನದ ಪ್ರಯುಕ್ತ ಎಲ್ಲಾ ಅಂಗನವಾಡಿ ಶಾಲೆಗಳಲ್ಲಿ ಜಂತು ನಿವಾರಕ ಮಾತ್ರೆಯನ್ನ ಮಕ್ಕಳಿಗೆ ನುಂಗಿಸಲಾಗುತ್ತದೆ. ಆ ದಿನದಂದು ನಿಮ್ಮ ಮಕ್ಕಳನ್ನು ಗೈರು ಹಾಜರಾಗದಂತೆ ಶಾಲೆಗೆ ಮತ್ತು ಅಂಗನವಾಡಿಗೆ ಕಳಿಸಿಕೊಡಿ. ಕಾರಣಾಂತರಗಳಿಂದ ಬಿಟ್ಟುಹೋದ ಮಕ್ಕಳಿಗೆ ಇದೇ ಡಿ.16ರಂದು ಮಪ್ ಅಪ್ ರೌಂಡ್‌ನಲ್ಲಿ ನಿಮ್ಮ ಮನೆ ಬಾಗಿಲಿಗೆ ಬಂದು ಮಾತ್ರೆಗಳನ್ನು ನುಂಗಿಸಲಾಗುತ್ತದೆ. ತಪ್ಪದೇ 1 ರಿಂದ 19 ವರ್ಷದ ಒಳಗಿನ ಮಕ್ಕಳಿಗೆ ನುಂಗಿಸುವ ಜವಾಬ್ದಾರಿಯನ್ನು ತಾಯಂದಿರು, ಕುಟುಂಬಸ್ಥರು ಹೊಂದಿರಿ ಎಂದರು.ಇದೇ ಸಂದರ್ಭದಲ್ಲಿ 12 ಮಕ್ಕಳಿಗೆ ವಿವಿಧ ಹಂತದ ಲಸಿಕೆಗಳನ್ನು ನೀಡಲಾಯಿತು. ಮತ್ತು ಮೂರು ಗರ್ಭಿಣಿಯರಿಗೆಟಿಡಿಲಸಿಕೆನೀಡಲಾಯಿತು. ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿ ಲೋಕಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಆಶಾ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕೃಷ್ಣಪ್ಪ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ತಾಯಿ ಮಕ್ಕಳು ಹಾಜರಿದ್ದರು.



# ನಾವು ಮೂರ್ಖರೇ, ಅಥವಾ ಅವರು ಬುದ್ಧಿವಂತರೇ....





### ಸ್ವಲ್ಪ ಖಾರವಾಗಿ ಯೋಚಿಸಿ ನೋಡಿ......

ಎಂತಹ ಅನಾಗರಿಕ ವ್ಯವಸ್ಥೆಯಲ್ಲಿ ನಾವಿದ್ದೇವೆ ಎಂಬ ಅರಿವಾಗಬಹುದು......

### ಗೊತ್ತೇನ್ರೀ ನಿಮಗೆ.......

ಹವಾಮಾನ ಇಲಾಖೆಯ ಮುನ್ಸೂಚನೆ ಪ್ರಕಾರ ಈ ಬಾರಿ ರಾಜ್ಯದ ಯಾವ ಪ್ರದೇಶದಲ್ಲಿ ಎಷ್ಟು ಮಳೆಯಾಗುತ್ತದೆ ಎಂದು.....

### ಗೊತ್ತೇನ್ರೀ ನಿಮಗೆ ......

ಈ ರಾಜ್ಯದಲ್ಲಿ, ಒಂದು ವರ್ಷದಲ್ಲಿ, ಯಾವ ಯಾವ ಪ್ರದೇಶದಲ್ಲಿ, ಜನ ಯಾವ ಯಾವ ಹಣ್ಣು ತರಕಾರಿ ಸೊಪ್ಪು ಬೇಳೆಕಾಳುಗಳು ಮುಂತಾದ ಆಹಾರ ಪದಾರ್ಥಗಳನ್ನು ಎಷ್ಟು ಪ್ರಮಾಣದಲ್ಲಿ ಉಪಯೋಗಿಸುತ್ತಾರೆ ಅಂತ....

### ಗೊತ್ತೇನ್ರೀ ನಿಮಗೆ.....

ಯಾವ ಯಾವ ಬೆಳೆ ಬೆಳೆಯಲು ಎಷ್ಟು ಹಣ ಬೇಕು, ಎಷ್ಟು ಮಾನವ ಸಂಪನ್ಮೂಲ ಬೇಕು, ಎಷ್ಟು ರಸಗೊಬ್ಬರ ಬೇಕು, ಎಷ್ಟು ಮುಂಜಾಗ್ರತೆಯ ಕ್ರಮ ಕೈಗೊಳ್ಳಬೇಕು ಎಂದು....

### ಗೊತ್ತೇನ್ರೀ ನಿಮಗೆ.....

ಫಸಲು ಬಂದ ಮೇಲೆ ಅದನ್ನು ಎಲ್ಲಿ ಮಾರಬೇಕು, ಹೇಗೆ ಮಾರಬೇಕು, ಯಾವ ಬೆಲೆಗೆ ಮಾರಬೇಕು, ಯಾವ ಸಾರಿಗೆ ಉಪಯೋಗಿಸಬೇಕು ಅಂತ.....

### ಗೊತ್ತೇನ್ರೀ ನಿಮಗೆ.....

ಫಸಲಿನಿಂದ ನಷ್ಟ ಉಂಟಾದರೆ ಅದರ ಪರಿಣಾಮ ಹೇಗೆ ಎದುರಿಸಬೇಕು/ ಲಾಭ ಬಂದರೆ ಅದು ಯಾವ ರೀತಿ ಸದುಪಯೋಗ ಪಡಿಸಿಕೊಳ್ಳಬೇಕು ಎಂದು.........

### ಗೊತ್ತೇನ್ರೀ ನಿಮಗೆ....

ಇಳುವರಿ ಹೆಚ್ಚಾಗಿ ಬೇಡಿಕೆ ಕಡಿಮೆಯಾದರೆ ಎಲ್ಲಿಗೆ ರಫ್ತು ಮಾಡಬೇಕು. ಬೇಡಿಕೆ ಹೆಚ್ಚಾಗಿ ಪೂರೈಕೆ ಕಡಿಮೆಯಾದರೆ ಹೇಗೆ ರೈತರು ಗ್ರಾಹಕರಿಗೆ ತೊಂದರೆ ಆಗದಂತೆ ವ್ಯವಸ್ಥೆ ಮಾಡಬೇಕು ಅಂತ........
ಖಂಡಿತ ಸರಿಯಾಗಿ ಗೊತ್ತಿಲ್ಲ. ಏನೋ ಒಂದು ಕಾಟಾಚಾರದ ಅವಾಸ್ತವಿಕ ಸರ್ಕಾರಿ ಅಂಕಿಅಂಶಗಳ ಲೆಕ್ಕ ಕೊಡುತ್ತಾರೆ......

ಬೇಕಾದರೆ ಈ ಲೆಕ್ಕ ಕೇಳಿ, ಎಷ್ಟು ಖಚಿತವಾಗಿ ಹೇಳುತ್ತಾರೆ.......
ರಾಜ್ಯದ ಪ್ರತಿ ಚುನಾವಣಾ ಕ್ಷೇತ್ರಗಳಲ್ಲಿ ಒಕ್ಕಲಿಗರು/ ಕುರುಬರು/ದಲಿತರು/ಲಿಂಗಾಯತ – ವೀರಶೈವರು/ಬ್ರಾಹ್ಮಣರು/ಹಿಂದುಳಿದ ವರ್ಗದವರು/ ಮುಸ್ಲೀಮರು/ ಕ್ರಿಶ್ಚಿಯನ್ ಮುಂತಾದ ಪ್ರತಿ ಜಾತಿ ಧರ್ಮದ ಮತದಾರರ ಸಂಖ್ಯೆಯನ್ನು ........



### ಥೀ........

ಕೋಟ್ಯಾಂತರ ಹಣ ಖರ್ಚು ಮಾಡಿ ಎಲ್ಲಾ ಪಕ್ಷಗಳು ಪ್ರತಿ ವಿಧಾನಸಭಾ/ಲೋಕಸಭಾ ಕ್ಷೇತ್ರದ ಗೆಲ್ಲುವ ಅಭ್ಯರ್ಥಿಗಳ ಬಗ್ಗೆ ಸರ್ವೆ ಮಾಡಿಸುವುದೇನು, ಸಮೀಕ್ಷೆ/ಚುಟುಕು ಮತದಾನ ಮಾಡಿಸುವುದೇನು, ಅಭಿಪ್ರಾಯಗಳನ್ನು ಕೇಳುವುದೇನು...

ಅದೇ ಹಣದಲ್ಲಿ ಆ ಕ್ಷೇತ್ರದ ಸಮಸ್ಯೆಗಳು ಮತ್ತು ಅದರ ನಿವಾರಣೆಗಾಗಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಎಂದಾದರೂ ಸರ್ವೆ ಮಾಡಿಸಿದ್ದಾರಾ.....

ಕಲ್ಲಿನ ಮೂರ್ತಿಗಳ ದೇವಸ್ಥಾನಗಳು ಬಿಡಿ, ರಾಜ್ಯದ ಒಂದೇ ಒಂದು ಮಠ ಚರ್ಚು ಮಸೀದಿ ಈ ದುಷ್ಟ – ಭ್ರಷ್ಟ ರಾಜಕಾರಣಿಗಳಿಗೆ ನಮ್ಮಲ್ಲಿ ಪ್ರವೇಶವಿಲ್ಲ. ಕೇವಲ ಸಾಮಾನ್ಯ ಭಕ್ತರು ಮಾತ್ರ ಬರಲಿ. ಮತದಾನ ಆಯಾ ವ್ಯಕ್ತಿಗಳ ಸ್ವಾತಂತ್ರ್ಯ. ಅದನ್ನು ಯಾರಿಗೆ ಬೇಕಾದರೂ ಚಲಾಯಿಸಲಿ. ಸಂಕಷ್ಟದ ಜನರ ಸೇವೆ ಮಾತ್ರ ನಮ್ಮ ಉದ್ದೇಶ ಎಂದು ಬಹಿರಂಗವಾಗಿ ಹೇಳಲಿಲ್ಲ....

ಒಂದೇ ಒಂದು ಮಾಧ್ಯಮ, ಕೃಷಿ, ಆಹಾರ ಕಲಬೆರಕೆ, ಪರಿಸರ ನಾಶ, ಹದಗೆಡುತ್ತಿರುವ ಜನರ ಆರೋಗ್ಯದ ಬಗ್ಗೆ ಸರಿಯಾದ ಮಾಹಿತಿ ಮತ್ತು ಚರ್ಚೆ ನೀಡುತ್ತಿಲ್ಲ......

ಚುನಾವಣೆ ಎಂದರೆ ಯುದ್ಧ ಕುರುಕ್ಷೇತ್ರ ಮಹಾಭಾರತ ಅಖಾಡ ತಂತ್ರ ಕುತಂತ್ರ ಪ್ರತಿತಂತ್ರ, ಏನಾದರೂ ಮಾಡಿ ಜಯಶಾಲಿಯಾಗು ಎಂಬ ವಿಷಬೀಜವನ್ನು ಬಿತ್ತಿ ಜನರ ಮನಸ್ಸುಗಳನ್ನು ಹಾಳು ಮಾಡುತ್ತಿವೆ......

ಕಲುಷಿತ ವಾತಾವರಣದಿಂದ, ತಾಪಮಾನದ ಏರಿಕೆಯಿಂದ ಅನೇಕ ಜನ ಕ್ಯಾನ್ಸರ್, ಆಸ್ತಮಾ, ಕಿಡ್ನಿ ವೈಫಲ್ಯ, ಶ್ವಾಸಕೋಶದ ತೊಂದರೆಯಿಂದ ನರಳುತ್ತಾ ಖಾಸಗಿ ಆಸ್ಪತ್ರೆಯ ದುಬಾರಿ ಖರ್ಚಿಗೆ ಬೆಚ್ಚಿಬಿದ್ದು ಸರ್ಕಾರಿ ಆಸ್ಪತ್ರೆಗಳ ಅವ್ಯವಸ್ಥೆಯ ನರಕದಲ್ಲಿ ನರಳುತ್ತಿದ್ದಾರೆ......

ಇತ್ತ ಐಷಾರಾಮಿ ಹೋಟೆಲ್‌ಗಳಲ್ಲಿ ಅಭ್ಯರ್ಥಿಗಳ ಆಯ್ಕೆಗೆ ದಿನಗಟ್ಟಲೆ ಮೀಟಿಂಗ್ ಮಾಡುತ್ತಾ, ನಂತರ ಚುನಾವಣೆ ಗೆಲ್ಲಲು ಕೋಟ್ಯಾಂತರ ಹಣ ಖರ್ಚು ಮಾಡಿ ಸಮಾವೇಶಗಳನ್ನು ಮಾಡುತ್ತಾ ಮಜಾ ಮಾಡುತ್ತಿದ್ದಾರೆ......

ಚುನಾವಣಾ ಗೆದ್ದ ತಕ್ಷಣ ರಾಜ್ಯವನ್ನು ಇವರಪ್ಪನ ಆಸ್ತಿ ಎಂಬಂತೆ ಅನುಭವಿಸುತ್ತಾರೆ.......

ಚುನಾವಣೆ ಗೆಲ್ಲಲು ಉಪಯೋಗಿಸುವ ಹಣ ಶ್ರಮದ ಭಾಗದಲ್ಲಿ ಸ್ವಲ್ಪ ಸಮಾಜದ ಅಭಿವೃದ್ಧಿಗೆ ಶ್ರಮಿಸಿದ್ದರೆ ನಮ್ಮ ಪರಿಸ್ಥಿತಿ ಎಲ್ಲೋ ಇರುತ್ತಿತ್ತು......

### ಛಿ... ಛಿ.....

ಎಂಥಾ ವ್ಯವಸ್ಥೆಯಲ್ಲಿ ನಾವಿದ್ದೇವೆ. ಇದನ್ನು ಒಪ್ಪಿಕೊಂಡು ಸುಮ್ಮನಿರೋಣವೇ ? ಅಥವಾ,

ಬದಲಾವಣೆಗೆ ಪ್ರಯತ್ನಿಸೋಣವೇ ?

ಬದಲಾವಣೆ ಆಗುವುದಾದರೆ ಹೇಗೆ ಎಂಬುದನ್ನು ಯೋಚಿಸುತ್ತಾ....

ನಿಮ್ಮೊಂದಿಗೆ....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# ವಿಕಲಚೇತನರು ಶಕ್ತಿ ಮೀರಿ ಜೀವನ ಕಟ್ಟಿಕೊಳ್ಳಲು ಸಬಲರು



» **ಬಳ್ಳಾರಿ**

ಸಮಾಜದಲ್ಲಿ ವಿಕಲಚೇತನರು ತಮ್ಮ ಶಕ್ತಿ ಮೀರಿ ಜೀವನ ಕಟ್ಟಿಕೊಳ್ಳಲು ಸಬಲರಾಗಿದ್ದು, ಇತರರಂತೆ ಉನ್ನತ ಸ್ಥಾನಕ್ಕೇರುವ ಛಲ ಹೊಂದಿರುತ್ತಾರೆ ಎಂದು ಶಾಸಕ ಜೆ.ಎನ್. ಗಣೇಶ್ ಹೇಳಿದರು.

ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಏರ್ಪಡಿಸಿದ್ದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ದೈಹಿಕ–ಮಾನಸಿಕವಾಗಿ ಸದೃಢ ಇರುವ ಮನುಷ್ಯರೇ ಬೇಸತ್ತು, ಕಷ್ಟಕರ ಜೀವನ ನಡೆಸುತ್ತಾರೆ. ಆದರೆ ವಿಕಲಚೇತನರು ಕಷ್ಟ–ನೋವು, ಅಸಹಾಯಕತೆಯ ಸಂದರ್ಭದಲ್ಲಿಯೂ ಯಾವುದೇ ಬೆಂಬಲವಿಲ್ಲದೆ ಜೀವನ ನಡೆಸಲು ಶಕ್ತರಾಗಿರುತ್ತಾರೆ ಎಂದರು.ವಿಕಲಚೇತನರಲ್ಲಿ ಒಗ್ಗಟ್ಟು–ಒಮ್ಮತದ ಭಾವನೆಯಿದ್ದು, ಸರ್ಕಾರ ರೂಪಿಸಿರುವ ಯೋಜನೆ ಅಥವಾ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು, ಆರ್ಥಿಕವಾಗಿ ಸಬಲರಾಗಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ಸಮಾಜದಲ್ಲಿ ಅಂಗವೈಕಲ್ಯತೆಯಿಂದ ಕೂಡಿದ ಜನರನ್ನುಕಾಣುವದೃಷ್ಟಿಬದಲಾಯಿಸುವಕಾರ್ಯವಾಗಬೇಕು. ಕರುಣೆ ತೋರದೇ ಅವರನ್ನು ಸಮಾನತೆಯಿಂದ ಕಾಣಬೇಕು ಎಂದು ಹೇಳಿದರು.ಅಂಗವಿಕಲರೂ ಸಹ ಸಾಧನೆ ಮಾಡಲು ಅರ್ಹರಾಗಿದ್ದು, ವಿಜ್ಞಾನಿ ಸ್ಟೀಫೆನ್ ಹಾಕಿಂಗ್ ಅವರು ತಮ್ಮ ಅಂಗ ವೈಕಲ್ಯತೆಯನ್ನು ಮೆಟ್ಟಿ ನಿಂತು ಸಾಧನೆ ಶಿಖರ ಏರಿದ್ದರು. ಅದರಂತೆ ಎಲ್ಲಾ ವಿಶೇಷಚೇತನರು ಕಲೆ, ನೃತ್ಯ, ಆಟ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆ ಮಾಡಿ, ಹಸನ್ಮುಖ–ಲವಲವಿಕೆಯಿಂದ ಜೀವನ ನಡೆಸಬೇಕು ಎಂದು ಹುರಿದುಂಬಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T